

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ
Editor : MARUTI BASAVANTAPPA HOSAMANI
Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ
ಬಾಗಲಕೋಟೆಯಿಂದ ಪ್ರಕಟಿತ
RNI REG No. : KARKAN/2016/75068

SIHI KAHI
KANNADA DAILY MORNING
BAGALKOT

Volume : 07 | Issue : 196 | Saturday 12-04-2025 | E-mail : maruti.b.hosamani76@gmail.com | Page: 4 | Price : Rs. 1/-


## ಎನ್.ಎಸ್.ಎಸ್ ವಾರ್ಷಿಕ ಶಿಬಿರದ ಸಮಾರೋಪ ಸಮಾರಂಭ

**ಸಿಹಿ ಕಹಿ ಸುದ್ದಿ,**

**ಹೊಸಳ್ಳಿ :** ರೋಣ ತಾಲೂಕಿನ ಕೆ ಎಸ್ ಎಸ್ ಮಹಾವಿದ್ಯಾಲಯದ ಎನ್.ಎಸ್.ಎಸ್ ಘಟಕದ ವಾರ್ಷಿಕ ವಿಶೇಷ ಶಿಬಿರವನ್ನು ಹೊಸಳ್ಳಿ ಗ್ರಾಮದಲ್ಲಿ ಆಯೋಜಸಲಾಗಿತ್ತು. ಸಂಪ್ರದಾಯದಂತೆಎನ್.ಎಸ್.ಎಸ್ಶಿಬಿರದ ಮುಕ್ತಾಯ ಸಮಾರಂಭ ಜರುಗಿತು. ಈ ಸಮಯದಲ್ಲಿ ಮುಖ್ಯೋಪಾಧ್ಯಾಯರಾದ ಡಾ, ರಾಜಯ್ಯ.ಆರ್ ಹಿರೇಮಠ ಅವರು ಇಂತಹ ಯೋಜನೆಗಳಿಂದ ಕೂಡಿರುವ ಘಟಕಗಳು ಪದೇ ಪದೇ ನಮ್ಮ ಗ್ರಾಮಕ್ಕೆ ಬರುವುದಾದರೆ ಸ್ವಾಗತಿಸಿ ತಮ್ಮ ಶಾಲೆಯಲ್ಲಿ ಎಲ್ಲ ತರದ ಮೂಲಭೂತ ಸೌಕರ್ಯ ಒದಗಿಸಿ ಸಹಕಾರ ನೀಡುವುದಾಗಿ ಭರವಸೆ ಇಟ್ಟರು ಗ್ರಾಮ ಪಂಚಾಯಿತಿಯ ಸದಸ್ಯರಾದ ಶ್ರೀ ಎಸ್ ಬಿ ರೆಡ್ಡಿರವರು ಸತತ ಮೂರು ನಾಲ್ಕು ವರ್ಷಗಳಿಂದ ಪ್ರಯತ್ನ ಪಟ್ಟು ಮೂಲಭೂತ ಸೌಕರ್ಯವನ್ನೆಲ್ಲ ಸಿದ್ಧಪಡಿಸಿ ಕೊಂಡು ತಮ್ಮೂರಿಗೆ ರಾಷ್ಟ್ರೀಯ ಸೇವಾ ಯೋಜನೆಯ ಶಿಬಿರವನ್ನು ಹಮ್ಮಿಕೊಳ್ಳವಂತೆ ಮಾಡಲಾಯಿತು. ಇಂತಹ ಕಾರ್ಯಗಳಿಗೆ ತಮ್ಮ ಪಂಚಾಯತ್ ಅಧಿಕಾರಿ ವರ್ಗ ಗ್ರಾಮಸ್ಥ ರಿಂದ ಯುವಕ ಮಿತ್ರರಿಂದಎಲ್ಲಾತರದಸಹಾಯಸಹಕಾರದ ಭರವಸೆನಿಟ್ಟು ಮುಂದಿನ ದಿನಮಾನಗಳಲ್ಲಿ ಗ್ರಾಮದ ಜನರಲ್ಲಿರುವ ಮೌಢ್ಯತೆಗಳನ್ನು ಹೋಗಲಾಡಿಸಲು ಇಂತಹ ಘಟಕಗಳ ಸೇವೆ ತಮ್ಮ ಗ್ರಾಮಕ್ಕೆ ಅವಶ್ಯಕತೆ ಎಂಬ ವಿಚಾರವನ್ನು ವ್ಯಕ್ತಪಡಿಸಿದರು.

ಅದೇ ರೀತಿಯಾಗಿ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಶಿವುಕುಮಾರ ಜುಮ್ಮನಗೌಡ ಅವರು ನಮ್ಮ ಶಾಲೆಯು ಹೈಟೆಕ್ ಶೌಚಾಲಯವನ್ನು ಹೊಂದಿದ್ದು, ವಿದ್ಯಾರ್ಥಿನಿ ಯರಿಗೆ ಯಾವುದೇ ರೀತಿಯ ಸಮಸ್ಯೆಯಾಗದ ರೀತಿಯಲ್ಲಿ




ಮೂಲಭೂತ ಅವಶ್ಯಕತೆಗಳ ಪೂ–ರೈಕೆ ಮಾಡುವಲ್ಲಿ ನಮ್ಮ ಶಾಲಾ ಸಿಬ್ಬಂದಿ ವರ್ಗ ಎಸ್ಡಿಎಂಸಿ ಸರ್ವ ಸದಸ್ಯರು ಸತತ ಪ್ರಯತ್ನದಿಂದ ಎಲ್ಲಾ ಸೌಕರ್ಯವನ್ನು ಒದಗಿಸುವಲ್ಲಿ ಯಶಸ್ವಿ ಯಾಯಿತು. ಈ ಶಿಬಿರದಲ್ಲಿ ಶಿಬಿರಾರ್ಥಿಗಳು ಪಡೆದ ಅನುಭವ ಮುಂದಿನ ದಿನಮಾನದಲ್ಲಿ ತಮ್ಮ ಗ್ರಾಮಗಳ ಅಭಿವೃದ್ಧಿಗೆ ಸಹಕಾರಿಯಾಗಲಿ. ತಾವೆಲ್ಲರೂ ಮತದಾನದ ಹಕ್ಕನ್ನು ಹೊಂದಿರುವ ತಾವು ಉತ್ತಮ ನಾಯಕನ ಆಯ್ಕೆಮಾಡುವಲ್ಲಿ ಜವಾಬ್ದಾರಿಯುತವಾಗಿ ಕಾರ್ಯ ಪವೃತ್ತರಾಗ ಬೇಕೆಂಬ, ಸಮಾಜ ಸುಧಾರಣಾ ಚಟುವಟಿಕೆಗಳಲ್ಲಿ ತೊಡಗಿ ಕೊಳ್ಳುವ ವಿಚಾರವನ್ನು ತಿಳಿಸಿದರು.

ಕಾರ್ಯಕ್ರಮ ಅಧಿಕಾರಿಗಳಾದ ಡಾ, ಎಸ್. ಆರ್ ನದಾಫ್ ಅವರು ವಿದ್ಯಾರ್ಥಿಗಳಲ್ಲಿ ಸಮಾಜ ಗ್ರಾಮಗಳ ಅಭಿವೃದ್ಧಿ ಸೇವಾ ಮನೋಭಾವನೆಯನ್ನು ಬೆಳೆಸುವಲ್ಲಿ ಎನ್.ಎಸ್.ಎಸ್ ನ ಪಾತ್ರ ಅತ್ಯಂತ ಮಹತ್ವದವಾಗಿದ್ದು ಈ ಚಟುವಟಿಕೆಯಲ್ಲಿ ತೊಡಗಿರುವ ಶಿಬಿರಾರ್ಥಿಗಳಿಗೆ ಎಲ್ಲಾ ತರದ ಸಹಾಯ ಸಹಕಾರ ನೀಡಿದ ಶಾಲಾ ಮುಖ್ಯೋಪಾಧ್ಯರಿಗೆ ಸಿಬ್ಬಂದಿ ವರ್ಗದವರಿಗೆ ಎಸ್.ಡಿ.ಎಂ.ಸಿ ಅಧ್ಯಕ್ಷರಿಗೆ ಸರ್ವ ಸದಸ್ಯರಿಗೆ ಗ್ರಾಮ ಪಂಚಾಯತ ಅಧಿಕಾರಿ ವರ್ಗ ಅಧ್ಯಕ್ಷರು ಉಪಾಧ್ಯಕ್ಷರು ಸರ್ವ ಸದಸ್ಯರಿಗೆ ಧನ್ಯವಾದಗಳು ಅರ್ಪಿಸಿದರು ಅದೇ ರೀತಿ ಈ ಶಿಬಿರದಲ್ಲಿ ಭಾಗವಹಿಸಿದ ಶಿಬಿರಾರ್ಥಿಗಳು ಶಿಬಿರದ ಅನುಭವಗಳಿಂದ ಪಡೆದ ಅನುಭವಗಳನ್ನು ತಮ್ಮ ಮುಂದಿನ ಭವಿಷ್ಯತ್ತಿನ ಜೀವನದಲ್ಲಿ ಪರಿಣಾಮಕಾರಿಯಾಗಿ ಬಳಸಿ ಕೊಂಡು ಸಮಾಜದ ನ್ಯೂನ್ಯತೆಗಳನ್ನು ಹೋಗಲಾಡಿಸಲು ಕಾರ್ಯ ಪ್ರವೃತ್ತರಾಗಬೇಕೆಂದು ತಿಳಿಸಿದರು. ಅದೇ ರೀತಿಯಾಗಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಶ್ರೀ ಸಿ.ಬಿ ಮೊಲೀಸಪಾಟೀಲ್ ರವರು ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ನಮ್ಮ ಮಹಾವಿದ್ಯಾಲಯ ಸುಮಾರು 10 ವರ್ಷಗಳಿಂದ ವಿವಿಧ ಗ್ರಾಮಗಳನ್ನು ದತ್ತು ಗ್ರಾಮಗಳನ್ನಾಗಿ ಸ್ವೀಕರಿಸಿ ಕೊಂಡು ರಾಷ್ಟ್ರೀಯ ಸೇವಾ ಯೋಜನೆಯ ಅಡಿ ಒಳಗೆ ವಿಶೇಷ ಶಿಬಿರವನ್ನು ಹಮ್ಮಿಕೊಂಡು ಗ್ರಾಮೀಣ ಸೇವಾ ಚಟುವಟಿಕೆಯಲ್ಲಿ ವಿದ್ಯಾರ್ಥಿಗಳನ್ನುತೊಡಗಿಸುತ್ತಾಬಂದಿದ್ದು, ಮಹಾವಿದ್ಯಾಲಯ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಸಹಾಯಕಾರಿ ಯಾಗುವಂತೆ ಈ ಶಿಬಿರಗಳು ಕಾರ್ಯ ಪ್ರವೃತ್ತವಾಗುತ್ತಿದೆ. ನಮ್ಮ ಮಹಾವಿದ್ಯಾಲಯದ ವಿದ್ಯಾರ್ಥಿಗಳನ್ನು ತಮ್ಮ ಮನೆ ಮಕ್ಕಳೆಂದು ಸ್ವಾಗತಿಸಿ, ಎಲ್ಲ ತರಹದ ಮೂಲಭೂತ ಸೌಕರ್ಯ ಒದಗಿಸುವಲ್ಲಿ ಪ್ರತ್ಯಕ್ಷವಾಗಿ ಮತ್ತು ಪರೋಕ್ಷವಾಗಿ ಕಾರಣೀಕರ್ತ ರಾಗಿರುವ ಹೊಸಳ್ಳಿ ಗ್ರಾಮದ ಸರ್ವರಿಗೂ ಮಹಾವಿದ್ಯಾಲಯದ ಪರವಾಗಿ ತುಂಬು ಹೃದಯದ ಧನ್ಯವಾದಗಳನ್ನು ಅರ್ಪಿಸಿದರು.

ಈ ಸಮಯದಲ್ಲಿ ವೇದಿಕೆಯಲ್ಲಿ ಅಧ್ಯಕ್ಷತೆ ಕೆ.ಎಸ್.ಎಸ್ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯ ರೋಣ ಪ್ರಾಚಾರ್ಯರಾದ ಶ್ರೀ ಸಿ.ಬಿ ಮೊಲೀಸ ಪಾಟೀಲ್ ಅವರು ವಹಿಸಿಕೊಂಡಿದ್ದರು. ಮುಖ್ಯ ಅತಿಥಿಗಳಾಗಿ ಡಾ. ರಾಚಯ್ಯ ಆರ್ ಹಿರೇಮಠ, ಶ್ರೀ ಬಿ. ಎಸ್ ರಡ್ಡೇರ, ಶ್ರೀ ಶಿವುಕುಮಾರ ಜುಮ್ಮನಗೌಡ್ರ, ಶ್ರೀ ಎಂ ಹೆಚ್ ನಾಯ್ಕರ್ , ಶ್ರೀ ಬಿ ಎಚ್ ಜಂಗನ್ನವರ್ ಹಾಗೂ ಶಿಬಿರಾರ್ಥಿಗಳು ಹಾಜರಿದ್ದರು.

**ಜಿಲ್ಲಾ ವರದಿಗಾರರು,**
**ಸಿಹಿ ಕಹಿ ಕನ್ನಡ ದಿನ ಪತ್ರಿಕೆ**
**ಹಾಗೂ ಎಸ್.ಕೆ ನ್ಯೂಸ್**
**ಕನ್ನಡ ಚಾನಲ್:ಎಸ್.ವಿ ಸಂಕನಗೌಡ್ರ.**
**ರೋಣ.ಗದಗ**

## ಇದೆ ಏ.18 ರಿಂದ "ರಿಕ್ಷಾ ಚಾಲಕ" ತೆರೆಗೆ



**ಬೆಂಗಳೂರ :** ಆಯುಷ್ ಸಿನಿ ಕ್ರಿಯೇಶನ್ಸ್ ಬ್ಯಾನರ್ ಅಡಿಯಲ್ಲಿ ಶರಾವತಿ ಶಶಿಕುಮಾರ್ ರವರು ನಿರ್ಮಿಸಿರುವ ಚಿತ್ರ "ರಿಕ್ಷಾ ಚಾಲಕ" ಇದೆ ಏ.18 ರಿಂದ ತೆರೆ ಕಾಣುತ್ತಿದೆ.

ಆಯುಷ್ ಶಶಿಕುಮಾರ್ ನಿರ್ದೇಶನದಲ್ಲಿ ಮೂಡಿ ಬಂದಿರುವ ಚಿತ್ರವು ಕೊರೋನ ಸಂದರ್ಭದಲ್ಲಿ ದೇಶಾದ್ಯಂತ ಲಾಕ್‌ಡೌನ್ ಆದಾಗ ಆಟೋ ಡ್ರೈವರ್‌ಗಳು ಎದುರಿಸಿದ ಸಂಕಷ್ಟಗಳನ್ನ, ಅನುಭವಿಸಿದ ನೋವುಗಳನ್ನ ಕಣ್ಣಾರೆ ಕಂಡಿದ್ದು , ಅದೇ ಕಥೆಯನ್ನು ಈಗ ಸಿನಿಮಾ ರೂಪದಲ್ಲಿ ತೆರೆಗೆ ತಂದಿದ್ದಾರೆ. ಒಳ್ಳೆ ಆಟೋ ಡ್ರೈರ್ ಸಮಾಜದಲ್ಲಿ ಸಾಕಷ್ಟು ಕಷ್ಟ ಎದುರಿಸುತ್ತಾನೆ.

ಆಟೋ ಡ್ರೈವರ್‌ಗಿರುವ ಕಷ್ಟವೇನು ಅಂತ ಈ ಸಿನಿಮಾದಲ್ಲಿ ತೋರಿಸಲಾಗಿದೆ. ಮನೆಮಂದಿಯೆಲ್ಲ ಕುಳಿತು ನೋಡಬಹುದಾದ ಚಿತ್ರ ಇದಾಗಿದ್ದು ಚಿತ್ರಮಂದಿರಕ್ಕೆ ಬಂದು ನೋಡಿ ಚಿತ್ರ ತಂಡವನ್ನು ಪ್ರೋತ್ಸಾಹಿಸಬೇಕೆಂದು ನಿರ್ಮಾಪಕರಾದ ಶರಾವತಿ ಶಶಿಕುಮಾರ ಮತ್ತು ನಾಯಕ ನಟ ಚಿರಂತ ಕೋರಿದ್ದಾರೆ.

ಮೈಸೂರು, ವರುಣ, ಕೆ ಆರ್ ನಗರ ,ಸಾಲಿಗ್ರಾಮ ಹಾಗೂ ಮುರ್ಡೇಶ್ವರದಲ್ಲಿ ಚಿತ್ರದ ಚಿತ್ರೀಕರಣ ನಡೆಸಲಾಗಿದೆ. ನಾಯಕ ಚಿರಂತ್ ಮೊದಲ ಬಾರಿಗೆ ಈ ಸಿನಿಮಾದಮೂಲಕಬಣ್ಣದಲೋಕಕ್ಕೆಪ್ರವೇಶಿಸಿದ್ದಾರೆ. ನಾಯಕಿಯಾಗಿ ನಂದಿನಿ, ಬಾಲರಾಜ್ ವಾಡಿ, ಮಿಮಿಕ್ರಿ ಗೋಪಿ, ಹರಣಿ, ಚಂದ್ರಪ್ರಭ, ವಿನೋದ್ ಗೊಬ್ರಗಾಲ, ರಜಿನಿ, ದರ್ಶನ್, ಮುನಿಸ್ವಾಮಿ, ನವೀನ್ ಕುಮಾರ್, ಮುಂತಾದವರಿದ್ದಾರೆ.

ಧರ್ಮಾಚಾರಿ ಸಹ ನಿರ್ಮಾಪಕರಾಗಿದ್ದಾರೆ. ವೇದಾಂತ್ ಅತಿಶಯ್ ಜೈನ್ ಸಂಗೀತ, ವಂಶಿ ಸಂಕಲನ, ಶಶಿ ಆರಕ್ಷಕ ಅವರ ಕಥೆ, ಸಾಹಿತ್ಯ, ಸಂಭಾಷಣೆ , ನೃತ್ಯ, ಆನಂದ್ ಅವರ ಛಾಯಾಗ್ರಹಣ ವಿ. ರಾಮದೇವ್ ಅವರ ಸಾಹಸ , ಕಲ್ಲೇಶ್, ಡಾ. ಪ್ರಭು ಗಂಜಿಹಾಳ , ಡಾ. ವೀರೇಶ್ ಹಂಡಿಗಿ ಪತ್ರಿಕಾ ಸಂಪರ್ಕ ,ದೇವು ಅವರ ಪ್ರಚಾರಕಲೆ ಈ ಚಿತ್ರಕ್ಕಿದೆ.

**–ಡಾ.ಪ್ರಭು ಗಂಜಿಹಾಳ**
**ಮೊ–9448775346**

## ಬನಹಟ್ಟಿಯಲ್ಲಿ ಬಾಬು ಜಗಜೀವನರಾಮ ಜಯಂತಿ



**ಬನಹಟ್ಟಿ :** ಪಟ್ಟಣದ ಹರಿಜನ ಕೇರಿಯ ದುರ್ಗಾದೇವಿ ದೇವಸ್ಥಾನದ ಹತ್ತಿರ ಶನಿವಾರ ಹಸಿರುಕ್ರಾಂತಿಯ ಹರಿಕಾರ, ರಾಷ್ಟ್ರ ನಾಯಕ, ಭಾರತದ ಮಾಜಿ ಉಪಪ್ರಧಾನಿ ಬಾಬು ಜಗಜೀವನರಾಮರ 118 ನೇ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ನಗರಸಭೆ ಮಾಜಿ ಅಧ್ಯಕ್ಷ ಶ್ರೀಶೈಲ ಬೀಳಗಿ ಬಾಬೂಜಿಯವರ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಿದರು.

ತಿಪ್ಪಣ್ಣ ಬಸಪ್ಪಗೋಳ, ಬಾಳು ಸಿದ್ದಪ್ಪಗೋಳ, ಶೀಶೈಲ ಬೀಳಗಿ, ರಾಜು ನಡುವಿನಮನಿ, ಶ್ರೀಶೈಲ ಗಸ್ತಿ, ದುರ್ಗವ್ವ ಹರಿಜನ,
ಹಮಾನಪ್ಪ ನಡುವಿನಮನಿ, ಮಾರುತಿ ಬಸಪ್ಪಗೋಳ, ಸಚಿನ ಅಣ್ಣೆಪ್ಪಗೋಳ,
ನವೀನ ನಡುವಿನಮನಿ, ವೆಂಕಪ್ಪ ಚಿಂಚಲಿ, ಶಿವಾನಂದ ದೇಸಾಯಿ ಸೇರಿದಂತೆ ಇನ್ನೂ ಹಲವರು ಭಾಗವಹಿಸಿದ್ದರು.

## ರಬಕವಿ–ಬನಹಟ್ಟಿ ನಗರಸಭೆ: ದಾಖಲೆ ಮನೆ ಕರ ವಸೂಲಿ: ಪ್ರಸಕ್ತ ಸಾಲಿನ ತೆರಿಗೆಗೆ ಶೇ. 5 ರಷ್ಟು ರಿಯಾಯಿತಿ



**ರಬಕವಿ–ಬನಹಟ್ಟಿ :** ಕಳೆದ 2024–25 ನೇ ಸಾಲಿನಲ್ಲಿ ರಬಕವಿ–ಬನಹಟ್ಟಿ ನಗರಸಭೆಯಲ್ಲಿನಮನೆಕರವಸೂಲಾತಿಯಲ್ಲಿ ಶೇ. 90 ಕ್ಕಿಂತಲೂ ಹೆಚ್ಚಿನ ಒಟ್ಟು 3.7 ಕೋಟಿ ರೂ.ಗಳಷ್ಟು ಕರ ವಸೂಲಿ ಮಾಡುವ ಮೂಲಕ ದಾಖಲೆ ಮಾಡಿದೆ ಎಂದು ಪೌರಾಯುಕ್ತ ಜಗದೀಶ ಈಟಿ ತಿಳಿಸಿದರು.

ಸಾರ್ವಜನಿಕರು ಸಹಕರಿಸಿದ್ದರಿಂದ ಈ ರೀತಿ ಕರ ವಸೂಲಾತಿಗೆ ಅನುಕೂಲವಾಗಿದ್ದು, ಮನೆ ಮನೆಗೆ ತೆರಳಿ ಕರ ವಸೂಲಿ ಬಗ್ಗೆ ಮನವರಿಕೆ ಮಾಡಿದ್ದಲ್ಲದೆ, ಜನತೆ ಸ್ವಯಂಪ್ರೇರಿತವಾಗಿ ನಗರಸಭೆಗೆ ಆಗಮಿಸಿ, ಕರ ಸಂದಾಯ ಮಾಡಿರುವುದಕ್ಕೆ ಸಂತಸ ಎನಿಸುತ್ತಿದೆ ಎಂದರು.

**ಸಬ್ಸಿಡಿ ಪ್ರಯೋಜನ ಪಡೆದುಕೊಳ್ಳಿ:**

ಪ್ರಸಕ್ತ ವರ್ಷದ 2024–25 ನೇ ಸಾಲಿನ ಆರ್ಥಿಕ ವರ್ಷದ ಮಾರುಕಟ್ಟೆ ಮಾರ್ಗಸೂಚಿಯಂತೆ ಬೆಲೆಯನ್ನು ಪರಿಷ್ಕರಣೆ ಮಾಡಿರುವ ನಗರಸಭೆಯು ಸದರಿ ದರಗಳ ಆಧಾರದ ಮೇರೆಗೆ ಆಸ್ತಿ ತೆರಿಗೆಯನ್ನು 2025–26 ನೇ ಸಾಲಿನದ್ದು ಏಪ್ರಿಲ್ ತಿಂಗಳೊಳಗಾಗಿ ನಗರಸಭೆಗೆ ಭರಣಾ ಮಾಡಿದ್ದಲ್ಲಿ ಶೇ. ಐದರಷ್ಟು ವಿನಾಯಿತಿಯನ್ನು ಸಾರ್ವಜನಿಕರ ಅನುಕೂಲಕ್ಕಾಗಿ ಕಲ್ಪಿಸಲಾಗಿದೆ ಎಂದು ನಗರಸಭಾ ಪೌರಾಯುಕ್ತ ಜಗದೀಶ ಈಟಿ ತಿಳಿಸಿದ್ದಾರೆ.

ಜನತೆ ಇದರ ಸದುಪಯೋಗ ಪಡೆದುಕೊಂಡು ನಗರದ ಸರ್ವಾಂಗೀಣ ಅಭಿವೃದ್ಧಿಗಾಗಿ ಸಹಕರಿಸುವಂತೆ ಕೋರಿದ್ದಾರೆ.

## ರಾಮನವಮಿ ಅಂಗವಾಗಿ ವಿಶೇಷ ಪೂಜೆ



**ರಬಕವಿ :** ಸಮೀಪದ ರಾಮಪುರದಲ್ಲಿ ರಾಮದೇವರ ದೇವಸ್ಥಾನದಲ್ಲಿರಾಮನವಮಿಅಂಗವಾಗಿಭಾನುವಾರ ವಿಶೇಷ ಪೂಜೆಯನ್ನು ಹಮ್ಮಿಕೊಳ್ಳಲಾಗಿತ್ತು.

ನೂತನವಾಗಿ ನಿರ್ಮಾಣವಾದ ದೇವಸ್ಥಾನದಲ್ಲಿ ಬೆಳಿಗ್ಗೆ ಎಲ್ಲಾ ಮೂರ್ತಿಗಳಿಗೆ ಅಭಿಷೇಕವನ್ನು ನಡೆಸಲಾಯಿತು.

ರಾಮ ಲಕ್ಷ್ಮಣ, ಸೀತೆ ಮತ್ತು ಹನುಮಾನ ದೇವರಿಗೆ ವಿಶೇಷ ಪೂಜೆಯನ್ನು ಹಮ್ಮಿಕೊಳ್ಳಲಾಯಿತು. ಹೂ ಮಾಲೆಗಳಿಂದ ಮೂರ್ತಿಗಳನ್ನು ಅಲಂಕಾರಗೊಳಿಸಲಾಗಿತ್ತು. ಸಾಮೂಹಿಕ ಮಂಗಳಾರುತಿ ನಡೆಯಿತು. ಮಧ್ಯಾಹ್ನಮಹಿಳೆಯರು ರಾಮನ ದೇವಸ್ಥಾನಕ್ಕೆ ಆಗಮಿಸಿ ಪೂಜೆ ಸಲ್ಲಿಸಿ ನೈವೇದ್ಯ ಅಪಿ9ಸಿದರು.

ಈ ಸಂದರ್ಭದಲ್ಲಿ ಹಿರಿಯರಾದ ವಿವೇಕಾನಂದ ಭಸ್ಮೆ, ಗೊಡಚೆಪ್ಪ ಹೊಸಕೋಟಿ, ನಾಝುರೆ, ಬಕರೆ, ಖಟಾವಕರ, ಕೋಪರ್ಡೆ, ಮಾರುತಿ ಗಂಥಡೆ, ರಾಮದಾಸ ಸಿಂಗನ, ಪ್ರಕಾಶ ಸಿಂಗಣ ಮತ್ತು ಇನ್ನೂ ಅನೇಕರು ಉಪಸ್ಥಿತರಿದ್ದರು.

## ಸಾಧಕರನ್ನು ಗುರುತಿಸುವುದು ಜನ ಮೆಚ್ಚುಗೆಯ ಕಾರ್ಯ: ಶಾಸಕ ಗುಡಗುಂಟಿ

**ಜಮಖಂಡಿ :** ಎಲೆಮರೆಯ ಕಾಯಿಯಂತೆ ಸಮಾಜದ ಏಳಿಗೆಗಾಗಿ ಸೇವೆ ಸಲ್ಲಿಸಿ ವಿಶೇಷ ಸಾಧನೆ ಮಾಡಿದ 35 ಜನ ಸಾಧಕರನ್ನು ಗುರುತಿಸಿ ಅವರ ಜೀವಮಾನ ಸಾಧನೆ, ಪಡೆದ ಪ್ರಶಸ್ತಿ–ಪುರಸ್ಕಾರಗಳ ಕುರಿತು 'ಅಪರೂಪದವರು' ಕೃತಿಯಲ್ಲಿ ದಾಖಲಿಸಿರುವುದು ಜನ ಮೆಚ್ಚುಗೆಯ ಕಾರ್ಯವಾಗಿದೆ ಎಂದು ಶಾಸಕ ಜಗದೀಶ ಗುಡಗುಂಟಿ ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಮತ್ತು ತಾಲ್ಲೂಕು ಘಟಕಗಳು, ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಮನ ಟ್ರಸ್ಟ್ ಬೆಂಗಳೂರು, ಸಾಹಿತ್ಯ ಸೌರಭ ವೇದಿಕೆ ಜಮಖಂಡಿ ಹಾಗೂ ಶ್ರೀ ವೀರೇಶ್ವರ ಪ್ರಕಾಶನ ಜಮಖಂಡಿ ಇವುಗಳ ಸಂಯುಕ್ತ ಆಶ್ರಯದಲ್ಲಿ ಇಲ್ಲಿನ ಡಾ.ಗುರುದೇವ ರಾನಡೆ ಸಾಂಸ್ಕೃತಿಕ ಸಭಾ ಭವನದಲ್ಲಿ ಭಾನುವಾರ ಜರುಗಿದ ಡಾ. ಸಂಗಮೇಶ ಮಟೋಳಿ ವಿರಚಿತ ತಾಲ್ಲೂಕಿನ 'ಅಪರೂಪದವರು' ಕೃತಿ ಲೋಕಾರ್ಪಣೆ ಮತ್ತು ರಾಜ್ಯಮಟ್ಟದ 'ಸಾಧಕರತ್ನ' ಪ್ರಶಸ್ತಿ ಪ್ರದಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಅಮೂಲ್ಯವಾದ ಸಮಯವನ್ನು ಕೊಟ್ಟು ಇನ್ನೊಬ್ಬರ ಸಾಧನೆಯನ್ನು ಮೆಚ್ಚಿ ಕೃತಿ ರಚಿಸಿರುವುದು ಲೇಖಕರ ಹೃದಯ ಶ್ರೀಮಂತಿಕೆಯ ಪ್ರತೀಕವಾಗಿದೆ ಎಂದರು.

ರಾಜ್ಯ ಸರ್ಕಾರದ ಮಾಹಿತಿ ಆಯೋಗದ ಆಯುಕ್ತ ರಾಜಶೇಖರ ಎಸ್. ಕೃತಿ ಲೋಕಾರ್ಪಣೆಮಾಡಿಮಾತನಾಡಿ,ಇಂದಿನ ಸಾಧಕರ ಜೀವಮಾನ ಸಾಧನೆಗಳ ಕುರಿತು ಮುಂದಿನ ಪೀಳಿಗೆಗೆ ಪರಿಚಯಿಸುವುದು ಮಹಾನ್ ಕಾರ್ಯವಾಗಿದೆ. ಸಾಧಕರ ಸಾಧನೆಗಳು ಮುಂದಿನ ಪೀಳಿಗೆಗೆ ಪ್ರೇರಣೆ, ಸ್ಫೂರ್ತಿ ನೀಡಲಿ ಎಂದು ಹಾರೈಸಿದರು.

ಬೆಂಗಳೂರಿನ ಬಸವನಗುಡಿಯ ಜಿಲ್ಲಾ ನೋಂದಣಾಧಿಕಾರಿ ಸವಿತಾ ಲಕ್ಷ್ಮಿ ಬೆಳಗಲಿ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿ, ಶಿಕ್ಷಣ, ಸಾಹಿತ್ಯ, ಕ್ರೀಡೆ ಹಾಗೂ ಕಲಾವಿದರ ಕುರಿತು ವ್ಯಕ್ತಿ ಚಿತ್ರಣಕ್ಕೆ ಸೇರಬಹುದಾದ ಲೇಖನಗಳನ್ನು ಕೃತಿಯಲ್ಲಿ ದಾಖಲಿಸುವ ಮೂಲಕ ಕಾಲಾಂತರದಲ್ಲಿ ಸಾಧಕರು ಮರೆತು ಹೋಗಬಾರದೆಂಬ ಲೇಖಕರ ಕಳಕಳಿ ಮೆಚ್ಚುವಂತಹದ್ದು ಎಂದರು.



ಬಾಗಲಕೋಟೆಯ ವಿಶ್ರಾಂತ ಪ್ರಾಚಾರ್ಯ ಪ್ರೊ.ಎನ್.ಆರ್.ಹಳ್ಳೂರಕೃತಿಪರಿಚಯಿಸುತ್ತ ಮಾತನಾಡಿ, ಜಮಖಂಡಿ ತಾಲ್ಲೂಕಿನ 'ಅಪರೂಪದವರು' ಕೃತಿಯನ್ನು ಕನ್ನಡ ಸಾರಸ್ವತ ಲೋಕಕ್ಕೆ ಕೊಡುಗೆ ನೀಡಿರುವ ಲೇಖಕ ಡಾ. ಸಂಗಮೇಶ ಮಟೋಳಿ ತಮ್ಮದೆಯಾದ ಹೆಜ್ಜೆ ಗುರುತುಗಳನ್ನು ಮೂಡಿಸಿದ್ದಾರೆ ಎಂದರು.

ಕಸಾಪ ಜಿಲ್ಲಾ ಘಟಕದ ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ ಮಾತನಾಡಿದರು. ಪಿ. ಬಿ. ಪ್ರೌಢ ಶಾಲೆಯ ಮುಖ್ಯ ಶಿಕ್ಷಕ ಭೂಷಣ ಪತ್ತಾರ, ಕಸಾಪ ಗೌರವ ಕಾರ್ಯದರ್ಶಿ ವಿನೋದ ಲೋಣಿ ಉಪಸ್ಥಿತರಿದ್ದರು.

ಗುರುಬಸುಗೌಡ ಪಾಟೀಲ, ಪರಮೇಶ್ವರ ತೇಲಿ, ಪುಂಡಲೀಕ ಭಜಂತ್ರಿ, ಸಿದ್ದು ಉಪ್ಪಲದಿನ್ನಿ ಸಂಗೀತ ಸೇವೆ ಸಲ್ಲಿಸಿದರು. ಕೃತಿಯಲೇಖಕಡಾ.ಸಂಗಮೇಶಮಟೋಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಾಧಕರತ್ನ ಪ್ರಶಸ್ತಿ ಸ್ವೀಕರಿಸಿದ 35 ಜನ ಸಾಧಕರ ಪರವಾಗಿ ಪ್ರಾಚಾರ್ಯ ಡಾ. ಟಿ. ಪಿ. ಗಿರಡ್ಡಿ ಅನಿಸಿಕೆ ಹಂಚಿಕೊಂಡರು. ವರ್ಷಾರಾಣಿ ನಾವಿ ಪ್ರಾರ್ಥನೆ ಗೀತೆ ಹಾಡಿದರು.

ಕಸಾಪ ತಾಲ್ಲೂಕು ಘಟಕದ ಅಧ್ಯಕ್ಷ ಸಂತೋಷ ತಳಕೇರಿ ಸ್ವಾಗತಿಸಿದರು. ಶಿಕ್ಷಕಿ ಸರಿತಾ ಶಿರಗುಪ್ಪಿ, ಶಿಕ್ಷಕ ನಾಗೇಶ ಮಾಲಗಾರ ಸೊಗಸಾಗಿ ನಿರೂಪಿಸಿದರು. ಪ್ರೊ. ಆರ್. ಕೆ. ಹೊಸಟ್ಟಿ ವಂದಿಸಿದರು.

ಇದಕ್ಕೂ ಮೊದಲು ನಗರದ ಎ. ಜಿ. ದೇಸಾಯಿ ವೃತ್ತದಿಂದ ಬಾಲಕರ ಸರ್ಕಾರಿ ಪಿ. ಬಿ. ಪ್ರೌಢ ಶಾಲೆಯ ಆವರಣದವರೆಗೆ ವಾದ್ಯಮೇಳ ಕಲಾ ತಂಡದೊಂದಿಗೆ ಸಾಧಕರನ್ನು ಮೆರವಣಿಗೆಯಲ್ಲಿ ಕರೆ ತರಲಾಯಿತು. ಭುವನೇಶ್ವರಿ ವೇಷಧಾರಿಣಿ ಬಾಲಕಿ ರಿತಿಕಾ ಪಾಟೀಲ ಕೃತಿಯನ್ನು ಹೊತ್ತು ಮೆರವಣಿಗೆಯಲ್ಲಿ ಸಾಗಿದ್ದು ವಿಶೇಷವಾಗಿತ್ತು.

## ತೇರದಾಳದಲ್ಲಿ ಸಂಭ್ರಮದ ರಾಮ ನವಮಿ



**ತೇರದಾಳ :** ಪಟ್ಟಣದಲ್ಲಿ ರಾಮ ನವಮಿಯನ್ನು ಭಕ್ತರು ಸಂಭ್ರಮ ಸಡಗರದಿಂದ ಆಚರಿಸಿದರು. ಕಾರ್ಯಕ್ರಮ ನಿಮಿತ್ಯ ಪೇಟೆ ಭಾಗದ ಹನುಮಾನ ದೇವಸ್ಥಾನದಲ್ಲಿ ಮದ್ಯಾಹ್ನ ರಾಮನ ತೊಟ್ಟಿಲು ಕಾರ್ಯಕ್ರಮ ಹಾಗೂ ನಾಮಕರಣ ಮುತ್ತೈದೆಯರಿಂದ ಜರುಗಿತು. ಹಲವು ಮಹಿಳೆಯರು ಜೋಗುಳ ಪದಗಳನ್ನು ಹಾಡಿದರು. ಬಳಿಕ ದೇವಸ್ಥಾನದ ಆವರಣದಲ್ಲಿ ಪಲ್ಲಕ್ಕಿ ಸೇವೆ ಜರುಗಿತು. ಸಪ್ನಾ ಲೋಹಿಯಾ, ಸಂಜನಾ ರೇಣಕೆ, ನೈನಾ ಭಟ್ಟಡ, ಭಾರತಿ ಕಾಸಟ, ರಂಜನಾ ರಾಠಿ, ಸುಮನ ರೇಣಕೆ, ಪದ್ಮಾ ಭಟ್ಟಡ, ಕೇದಾರ ಕಾಸಟ, ಬಾಳೂ ರಾಠಿ, ಸುರೇಶ ಗುರವ, ಅಲ್ಲಪ್ಪ ಮೇಗಾಡಿ, ನಟವರ ಲೋಹಿಯಾ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ರಾಮ ನವಮಿ ನಿಮಿತ್ಯ ಕಳೆದ ಒಂದು ವಾರದಿಂದ ಭಜನಾ ತಂಡದವರಿಂದ ಪ್ರತಿದಿನ ಹನುಮಾನ ದೇವಸ್ಥಾನದಲ್ಲಿ ಭಜನಾ ಹಾಡುಗಳು ನಡೆದವು. ಪಟ್ಟಣದ ಬಹುತೇಕ ಹನುಮಾನ ದೇವಸ್ಥಾನಗಳಲ್ಲಿ ರಾಮ ನವಮಿ ನಿಮಿತ್ಯ ವಿಶೇಷ ಅಲಂಕಾರಿತ ಪೂಜೆ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.

# ಬಿಜೆಪಿ ಸಂಸ್ಥಾಪನಾ ದಿನಾಚರಣೆ



**ಮಹಾಲಿಂಗಪುರ:** ಪಟ್ಟಣದ ಅಪ್ಪಗಿ ಚಿತ್ರಮಂದಿರದಲ್ಲಿ ಸ್ಥಳೀಯ ಬಿಜೆಪಿ ಮುಖಂಡರು ಬಿಜೆಪಿ ಸಂಸ್ಥಾಪನಾ ದಿನಾಚರಣೆ ಆಚರಿಸಿದರು.

ಬಿಜೆಪಿ ಸಂಸ್ಥಾಪನಾ ದಿನಾಚರಣೆಯ ನಿಮಿತ್ಯ ಬೂತ್ ಅಧ್ಯಕ್ಷರು ಮತ್ತು ಮುಖಂಡರ ಮನೆಗಳ ಮೇಲೆ ಬಿಜೆಪಿ ಪಕ್ಷದ ಧ್ವಜಾರೋಹಣ ನೆರವೇರಿಸಲಾಯಿತು.

ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಮಹಾಂತೇಶ ಹಿಟ್ಟಿನಮಠ ಮಾತನಾಡಿ ಬಿಜೆಪಿ ಇಂದು ವಿಶ್ವದ ಅತಿದೊಡ್ಡ ಪಕ್ಷವಾಗಿದೆ.

2014ರಲ್ಲಿನರೇಂದ್ರಮೋದಿಯವರುಪ್ರಧಾನಿಯಾದ ನಂತರ ಪಕ್ಷವು ಅಂತರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಳ್ಳುವಂತಾಗಿದೆ. ಅದರಲ್ಲೂ ಅತೀ ಹೆಚ್ಚು ಯುವಶಕ್ತಿಯು ಬಿಜೆಪಿ ಪಕ್ಷದ ಜೊತೆಗೆ ಇರುವದು ಹೆಮ್ಮೆಯ ಸಂಗತಿಯಾಗಿದೆ.

ಬಿಜೆಪಿ ಮುಖಂಡರಾದ ಬಸನಗೌಡ ಪಾಟೀಲ, ಜಿ. ಎಸ್. ಗೊಂಬಿ,

ಈರಪ್ಪ ದಿನ್ನಿಮನಿ, ಮಹಾಲಿಂಗಪ್ಪ ಕುಳ್ಳೋಳ್ಳಿ, ಶಂಕರಗೌಡ ಪಾಟೀಲ, ಆನಂದ ಖೋತ, ಚನ್ನಪ್ಪ ಪಟ್ಟಣಶೆಟ್ಟಿ, ಚಂದ್ರಶೇಖರ ಅಪ್ಪಗಿ, ಪ್ರಕಾಶ ತಟ್ಟಿಮನಿ, ಶಿವಬಸು ಗೌಂಡಿ, ಗುರುರಾಜ ಜಂಬಗಿ, ಬಸವರಾಜ ಯರಗಟ್ಟಿ, ರವಿ ಗಿರಿಸಾಗರ, ಮಹೇಶ ಜಿಡ್ಡಿಮನಿ, ಪಾತ್ರೋಟ ಸೇರಿದಂತೆ ಇನ್ನೂ ಹಲವರು ಉಪಸ್ಥಿತರಿದ್ದರು.

# ದೀನದಲಿತರ ಶ್ರೇಯೋಭಿವೃದ್ಧಿಗೆ ಶ್ರಮಿಸಿದ ಹಸಿರು ಕ್ರಾಂತಿಯ ಹರಿಕಾರ ಬಾಬು ಜಗಜೀವನ್ ರಾಮ್: ಡಾ.ಅರುಣಕುಮಾರ ಗಾಳಿ

**ಬಾಗಲಕೋಟೆ :** ಬಾಬುಜಿ ಎಂದೇ ಜನಪ್ರಿಯರಾಗಿರುವ ಡಾ.ಜಗಜೀವನ್ ರಾಮ್ ಅವರು ಬಡವರ, ಕಾರ್ಮಿಕರ ಮತ್ತು ದೀನದಲಿತರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸಿದ ಹಸಿರು ಕ್ರಾಂತಿಯ ಹರಿಕಾರರಾಗಿ ತಮ್ಮ ಜೀವನವನ್ನುಮುಡಿಪಾಗಿಟ್ಟಭಾರತದ ಶ್ರೇಷ್ಠ ದಲಿತ ಐಕಾನ್‌ಗಳಲ್ಲಿ ಒಬ್ಬರಾಗಿದ್ದರು ಎಂದು ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯರಾದ ಡಾ.ಅರುಣಕುಮಾರ ಗಾಳಿ ಅವರು ಹೇಳಿದರು.



ಅವರು ಬಾಗಲಕೋಟೆ ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಶನಿವಾರ ನಡೆದ ಡಾ.ಬಾಬು ಜಗಜೀವನ್ ರಾಮ್ ಅವರ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಮಾತನಾಡಿದರು.

ಬಾಬು ಜಗಜೀವನ್ ರಾಮ್ ಅವರು ಸ್ವಾತಂತ್ರ್ಯ ಹೋರಾಟಗಾರರಾಗಿ, ಸಮಾಜ ಸುಧಾರಕರಾಗಿ, ಚತುರ ಆಡಳಿತಗಾರರಾಗಿ, ಸಂವಿಧಾನ ಸಭೆಯ ಸದಸ್ಯರಾಗಿ ಮತ್ತು ಮೊದಲ ಸಚಿವ ಸಂಪುಟದ ಸದಸ್ಯರಾಗಿ ಮತ್ತು ಉಪ ಪ್ರಧಾನಿಯಾಗಿ ನಮ್ಮ ದೇಶಕ್ಕೆ ಮಹತ್ತರ ಕೊಡುಗೆ ನೀಡಿದ್ದಾರೆ. ಅವರು ಅಸ್ಪೃಶ್ಯರಿಗೆ ಸಮಾಜದ ಸಮಾನತೆ ಸಾಧಿಸಲು ಶ್ರಮಿಸಿದವರಗಿದ್ದಾರೆ. ಹಸಿರು ಕ್ರಾಂತಿಯ ಕ್ಷೇತ್ರದಲ್ಲಿ ಅಪಾರ ಕೊಡುಗೆ ನೀಡಿದ್ದಾರೆ. ಬಿಹಾರದಲ್ಲಿ ಗ್ರಾಮೀಣ ಕಾರ್ಮಿಕ ಚಳವಳಿಯನ್ನು ಸಂಘಟಿಸಿ, ಕಾರ್ಮಿಕರ ಬದುಕಿಗೆ ಬೆಳಕು ನೀಡಿ, ದೇಶಕ್ಕಾಗಿ ವಿಶಿಷ್ಟ ಸೇವೆ ಸಲ್ಲಿಸಿದ ದೂರದೃಷ್ಟಿಯ ನಾಯಕರಾಗಿದ್ದರು ಅವರ ಜೀವನದ ಆದರ್ಶಗಳನ್ನು ನಾವೆಲ್ಲರೂ ಅಳವಡಿಸಿಕೊಳ್ಳಬೇಕೆಂದು ಹೇಳಿದರು.


ರಾಜ್ಯಶಾಸ್ತ್ರ ವಿಭಾಗದ ಡಾ.ನಂದನ ಅವರು ಬಾಬು ಜಗಜೀವನ್ ರಾಮ್ ಬದುಕು ಸಾಧನೆ ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕ ಮತ್ತುಬೋಧಕೇತರಸಿಬ್ಬಂದಿವರ್ಗದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಗುತ್ತಿಗೆದಾರರ ಲೈಸನ್ಸ್ ನವೀಕರಣದಲ್ಲಿಸೇವಾ ನ್ಯೂನ್ಯತೆ ಪಿಡಬ್ಲೂಡಿ ಇಲಾಖೆಗೆ ದಂಡವಿಧಿಸಿದ ಜಿಲ್ಲಾಗ್ರಾಹಕರಆಯೋಗ

**ಬಾಗಲಕೋಟೆ :** ಗುತ್ತಿಗೆದಾರರಿಗೆಲೈಸನ್ಸ್ ನವೀಕರಣ ಮಾಡಿಕೊಡುವಲ್ಲಿ ಸೇವಾ ನ್ಯೂನ್ಯತೆಎಸಗಿದ ಲೋಕೋಪಯೋಗಿ ಇಲಾಖೆಗೆ 25 ಸಾವಿರ ರೂ.ಗಳ ಪರಿಹಾರ ಹಾಗೂ5 ಸಾವಿರದೂರಿನಖರ್ಚು ನೀಡುವಂತೆಜಿಲ್ಲಾಗ್ರಾಹಕರಆಯೋಗತೀರ್ಪು ನೀಡಿಆದೇಶ ಹೊರಡಿಸಿದೆ.

ಕ್ಲಾಸ್–1 ಗುತ್ತಿಗೆದಾರರಾದ ವಿದ್ಯಾಗಿರಿ ನಿವಾಸಿ ಚಂದ್ರಶೇಖರಚಿನಗುಡಿತಮ್ಮಗುತ್ತಿಗೆ ಲೈಸನ್ಸ್‌ಅವಧಿಜೂನ್ 29, 2020ಕ್ಕೆ ಮುಕ್ತಾಯಗೊಂಡಿತ್ತು.ಈ ಅವಧಿಯಲ್ಲಿ ಕೋವಿಡ್–19 ಸಾಂಕ್ರಾಮಿಕರೋಗದೇಶಾದ್ಯಂತ ಹಬ್ಬಿದ ಹಿನ್ನಲೆಯಲ್ಲಿ ನಿಗದಿತಅವಧಿಯಲ್ಲಿ ಲೈಸನ್ಸ್ ನವೀಕರಣ ಮಾಡಿಕೊಳ್ಳಲು ಆಗಿರುವದಿಲ್ಲ. ಪರಿಸ್ಥಿತಿ ಸಾಮಾನ್ಯಗೊಂಡ ಬಳಿಕ ಮೇ 23, 2022 ರಂದು ಲೈಸನ್ಸ್ ನವೀಕರಣಕ್ಕೆ ನಿಗದಿತ ಶುಲ್ಕ ಮತ್ತುದಂಡದೊಂದಿಗೆಅರ್ಜಿ ಸಲ್ಲಿಸಿದ್ದರು.ಪಿಡಬ್ಲೂಡಿಇಲಾಖೆಯ ಅಧಿಕಾರಿಗಳು ಲೈಸನ್ಸ್ ನವೀಕರಣಅವಧಿಯನ್ನು ನೊಂದಣಿಯಾದ ಆಗಸ್ಟ 6, 2022 ರಿಂದ ಆಗಸ್ಟ 5, 2027 ವರೆಗೆ ನವೀಕರಿಸದೇಜೂನ್ 30, 2020 ರಿಂದಜೂನ್ 29, 2025 ವರೆಗೆಒಟ್ಟು 5 ವರ್ಷದಅವಧಿಗೆ ನವೀಕರಿಸಿ ಸೇವಾ ನ್ಯೂನ್ಯತೆಎಸಗಿರುತ್ತಾರೆಎಂದುದೂರು ನೀಡಿದ್ದರು. ಇದಕ್ಕೆ ಪಿಡಬ್ಲೂಡಿಇಲಾಖೆಯ ಅಧಿಕಾರಿಗಳು ಲೈಸನ್ಸ್ ನವೀಕರಣಕ್ಕಾಗಿ 1 ವರ್ಷ 11 ತಿಂಗಳ ತಡವಾಗಿಅರ್ಜಿ ಸಲ್ಲಿಸಿದ್ದಾರೆ ಎಂದು ಹೇಳಿ ದೂರು ವಜಾಗೊಳಿಸಲು ಆಕ್ಷೇಪಣೆ ಸಲ್ಲಿಸಿದ್ದರು.ಈ ಬಗ್ಗೆ ಕೂಲಂಕುಷವಾಗಿ ಪರಿಶೀಲಿಸಿದ ಜಿಲ್ಲಾಗ್ರಾಹಕರಆಯೋಗವು ನವೀಕರಣ ಮಾಡುವಲ್ಲಿ ಸೇವಾ ನ್ಯೂನ್ಯತೆಕಂಡುಬಂದಿದೆ.ಅಲ್ಲದೇಅನುಚಿತ ವ್ಯಾಪಾರ ಪದ್ದತಿ ಅನುಸರಿಸಿದ್ದಾರೆಂದು ಆಯೋಗಅಭಿಪ್ರಾಯ ಪಟ್ಟು 25 ಸಾವಿರ ರೂ.ಗಳ ಪರಿಹಾರ, 5 ಸಾವಿರರೂ.ದೂರಿನಖರ್ಚು ಹಾಗೂ ತೀರ್ಪು ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ದೂರುದಾರರಿಗೆ ನೀಡುವಂತೆ ಆದೇಶಿಸಿದೆ. ಆದೇಶ ಪಾಲನೆ ಮಾಡುವಲ್ಲಿ ವಿಫಲವಾದಲ್ಲಿ ಪರಿಹಾರ ಮತ್ತುದೂರಿನಖರ್ಚು ಸೇರಿಒಟ್ಟು 30 ಸಾವಿರ ರೂ.ಗಳಿಗೆ ಶೇ.8ರ ಬಡ್ಡಿಯನ್ನು ಹಾಕಿ ತೀರ್ಪು ಹೊರಡಿಸಿದ ದಿನದಿಂದ ಪೂರ್ತಿ ಹಣ ಸಂದಾಯ ಮಾಡುವಂತೆತೀರ್ಪು ನೀಡಿದೆ.

# ಬಸವ ಜಯಂತಿ ನಿಮಿತ್ತ ರಾಜ್ಯಮಟ್ಟದ ಕವಿಗೋಷ್ಠಿಗೆ ಕವನಗಳ ಆಹ್ವಾನ



**ಬಾಗಲಕೋಟ :** ಕೇಂದ್ರ ಬಸವ ಸಮಿತಿ ಬೆಂಗಳೂರು ಇವರ ವತಿಯಿಂದ ಬಸವ ಜಯಂತಿ ನಿಮಿತ್ತ ಚೆನ್ನಮ್ಮಾಜಿಯವರ ಐಕ್ಯ ಸ್ಥಳವಾದಬೈಲಹೊಂಗಲದಲ್ಲಿ ಮೇ ನಾಲ್ಕರಂದು ರಾಜ್ಯಮಟ್ಟದ ಕವಿಗೋಷ್ಠಿ ಆಯೋಜಿಸಲಾಗಿದೆ. ಈ ನಿಮಿತ್ತ ಉದಯೋನ್ಮುಖ ಹಾಗೂ ಪ್ರತಿಭಾವಂತ ಕವಿಗಳಿಂದ ಬಸವೇಶ್ವರರು, ಅಕ್ಕಮಹಾದೇವಿ, ಅಲ್ಲಮಪ್ರಭು, ಸಿದ್ದರಾಮೇಶ್ವರರು, ಚನ್ನಬಸವಣ್ಣ, ಮಡಿವಾಳ ಮಾಚಿದೇವರು ಇತರ ಶರಣರ ತತ್ವಗಳ ಕುರಿತು ಕವನಗಳನ್ನು ಆಹ್ವಾನಿಸಲಾಗಿದೆ.

ಕವನ 30 ಸಾಲುಗಳಿಗೆ ಮಿಕ್ಕದಂತೆ ಕಾಗದದ ಒಂದೇ ಮಗ್ಗುಲಲ್ಲಿ ಬರೆದು ಅಥವಾ ಡಿಟಿಪಿ ಮಾಡಿಸಿ ಸ್ವವಿಳಾಸ, ಕಿರುಪರಿಚಯ, ಭಾವಚಿತ್ರ, ವಾಟ್ಸಪ್ ಮೊಬೈಲ್ ಸಂಖ್ಯೆಯೊಂದಿಗೆ ಏಪ್ರಿಲ್ 15ರ ಒಳಗಾಗಿ ಶ್ರೀ ಮೋಹನ ಬಸನಗೌಡ ಪಾಟೀಲ, ಕಾರ್ಯಕಾರಿ ಸಮಿತಿ ಸದಸ್ಯರು, ಕೇಂದ್ರ ಬಸವ ಸಮಿತಿ,"ಬಸವ ನಿವಾಸ", ಚನ್ನಮ್ಮನಗರ ಮೊದಲನೆಯ ಅಡ್ಡರಸ್ತೆ, ಬೈಲಹೊಂಗಲ– 591102, ಬೆಳಗಾವಿ ಜಿಲ್ಲೆ ಈ ವಿಳಾಸಕ್ಕೆ ನೋಂದಾಯಿತ ಅಂಚೆ ಮೂಲಕ ಕಳಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ 9448920888 ಸಂಪರ್ಕಿಸಬೇಕೆಂದು ಕೇಂದ್ರ ಬಸವ ಸಮಿತಿಯ ಅಧ್ಯಕ್ಷರಾದ ಡಾ. ಅರವಿಂದ ಜತ್ತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೀಮಂತವ್ವ ಕೆಂಪಯ್ಯ ಕರಡಿ ನಿಧನ



**ರಬಕವಿ:** ಇಲ್ಲಿಯ ಹೊಸಪೇಟೆ ಓಣಿಯ ಜಂಗಮ ಸಮಾಜದ ಹಿರಿಯರಾಗಿದ್ದ ಶ್ರೀಮತಿ ಸೀಮಂತವ್ವ ಕೆಂಪಯ್ಯ ಕರಡಿ ತಮ್ಮ 86 ನೆಯ ವಯಸ್ಸಿನಲ್ಲಿ ಎಪ್ರಿಲ್ 5 ರಂದು ನಿಧನರಾದರು. ಮೃತರು ತಮ್ಮ ಹಿಂದೆ ಮೂವರು ಪುತ್ರಿಯರು, ಓರ್ವ ಪುತ್ರ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

# ಸಗುಣ ರಾಮನ ನೆನೆದು ನಿರ್ಗುಣ ರಾಮರಾಗೋಣ: ಮಲ್ಲಿಕಾರ್ಜುನ ಹುಲಗಬಾಳಿ



**ರಬಕವಿ–ಬನಹಟ್ಟಿ :** ಮರ್ಯಾದಾ ಪುರುಷೋತ್ತಮ ಶ್ರೀರಾಮ ಭರತ ಖಂಡದ ಆರಾಧ್ಯದೈವ. ಸಗುಣ ರಾಮನ ನೆನೆದು ನಾವೆಲ್ಲರೂ ನಿರ್ಗುಣ ರಾಮರಾಗುವತ್ತ ಸಂಕಲ್ಪಿತರಾಗಬೇಕೆಂದು ಹಿರಿಯ ಸಾಹಿತಿ ಮಲ್ಲಿಕಾರ್ಜುನ ಹುಲಗಬಾಳಿ ಹೇಳಿದರು.

ಭಾನುವಾರದಂದು ರಾಮಪುರದ ಶ್ರೀರಾಮ ಮಂದಿರದಲ್ಲಿ ರಬಕವಿಯ ಡಿ.ಕೆ.ಕೊಟ್ರಶೆಟ್ಟಿ ಫೌಂಡೇಶನ್ ಮತ್ತು ಭಾರತ್ ಗ್ಯಾಸ್ ಜಂಟಿಯಾಗಿ ಆಯೋಜಿಸಿದ್ದ ಪ್ರಸಾದ ವಿತರಣೆ ಸಮಾರಂಭದಲ್ಲಿ ಚಿಗಳಿ ಕೃತಿಗೆ ಜಿಲ್ಲಾ ದತ್ತಿ ನಿಧಿ ಪುರಸ್ಕಾರ ದೊರೆತ ಹಿನ್ನೆಲೆಯಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿ, ಶ್ರೀರಾಮ ಪಿತೃವಾಕ್ಯ ಪರಿಪಾಲಕ, ಏಕ ಪತ್ನೀ ವೃತಸ್ಥ, ದುಷ್ಟ ಸಂಹಾರ ಮತ್ತು ಶಿಷ್ಟ ರಕ್ಷಣೆಗೆ ಬದ್ಧನಾಗಿ ವನವಾಸ ಜೀವನದಲ್ಲೇ ಕೈಂಕರ್ಯನಾಗಿ ಬಳಿಕ ಅರಸನಾಗಿ ಜನೋಪಕಾರಿಯಾಗಿ ಅಜರಾಮರನಾದ ಗುರುತರ ವ್ಯಕ್ತಿತ್ವದ ಕಾರಣಕ್ಕೆ ದೈವತ್ವದ ಪರಾಕಾಷ್ಠೆಗೇರಿದ. ವ್ಯಕ್ತಿ ಪರಿಪೂರ್ಣತೆಯ ಪ್ರತೀಕನಾಗಿರುವ ಶ್ರೀರಾಮನ ಆದರ್ಶಗಳನ್ನು ನಾವು ಅಳವಡಿಕೊಂಡು ಸಂತೃಪ್ತ ಜೀವನ ನಡೆಸಬೇಕೆಂದರು.

ಈಸಂದರ್ಭದಲ್ಲಿಫೌಂಡೇಶನ್‌ಅಧ್ಯಕ್ಷಸೋಮಶೇಖರ ಕೊಟ್ರಶೆಟ್ಟಿ, ಚಂದ್ರಶೇಖರ ಹುಲಗಬಾಳಿ, ಬಸವರಾಜ ದಲಾಲ, ರಾಮದಾಸ ಸಿಂಗನ್, ಗಿರೀಶ ಮುತ್ತೂರ, ವಿವೇಕಾನಂದ ಭಸ್ಮೆ,

ಡಾ.ಜಿ.ಎಚ್.ಚಿತ್ತರಗಿ, ಗಜಾನನ ವಜ್ರಮಟ್ಟಿ, ಗಜಾನನ ತೆಗ್ಗಿ, ಬಸವರಾಜ ಕುಳ್ಳೋಳ್ಳಿ, ಖಟಾವಕರ, ವಿಜಯಕುಮಾರ ಹಲಕುರ್ಕಿ, ಭಾರತ ಗ್ಯಾಸ್ ಸಿಬ್ಬಂದಿ ಉಪಸ್ಥಿತರಿದ್ದು, ಸಹಸ್ರಾರು ಭಕ್ತರಿಗೆ ಪ್ರಸಾದ ವಿತರಿಸಿದರು.

# ಡಾ. ಬಾಬು ಜಗಜೀವನರಾಮ್ ರವರ 118 ನೇ ಜನ್ಮ ದಿನಾಚರಣೆ

## ದೇಶ ಕಂಡ ಧೀಮಂತ ನಾಯಕ ಡಾ.ಬಾಬು ಜಗಜೀವನರಾಮ್: ಶಾಸಕ ಆಸೀಫ್ (ರಾಜು) ಸೇಠ

**ಬೆಳಗಾವಿ :** ಹಸಿರುಕ್ರಾಂತಿ ಹರಿಕಾರ ಡಾ.ಬಾಬು ಜಗಜೀವನರಾಮ್ ರವರು ತಮ್ಮ ಜೀವನವನ್ನು ಸಮಾಜ ಸುಧಾರಣೆಗೆ ಮೀಸಲಿಟ್ಟ ಧೀಮಂತ ನಾಯಕ. ತಮ್ಮ ಜೀವನದುದ್ದಕ್ಕು ಶೋಷಿತರ ಪರವಾಗಿ ಮತ್ತು ದೇಶದ ಅಭಿವೃದ್ಧಿಗಾಗಿ ಬಹಳಷ್ಟು ಕೆಲಸಗಳನ್ನು ಮಾಡಿದ್ದಾರೆ. ಹಸಿರುಕ್ರಾಂತಿ ಎಂದೇ ಹೆಸರು ಪ್ರಸಿದ್ಧ. ಜಗಜೀವನ್ ರಾಮ್ ಅವರು ವಿವಿಧ ಇಲಾಖೆಗಳ ಮಂತ್ರಿಯಾಗಿ ತಮ್ಮ ಕಾರ್ಯವನ್ನು ನಿರ್ವಹಿಸಿ, ದೇಶದ ಉಪ ಪ್ರಾಧಾನಿಯಾದ ಹೆಮ್ಮೆಯ ರಾಷ್ಟ್ರ ನಾಯಕರು ಎಂದು ಬೆಳಗಾವಿ ಉತ್ತರ ವಿಧಾನಸಭಾ ಕ್ಷೇತ್ರದ ಶಾಸಕ ಶಾಸಕ ಆಸೀಫ್ (ರಾಜು) ಸೇಠ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ ಹಾಗೂ ಸಮಾಜಕಲ್ಯಾಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಸಂಗಮೇಶ್ವರ ನಗರದ ಡಾ. ಬಾಬುಜಗಜೀವನರಾಮಉದ್ಯಾನವನದಲ್ಲಿ ನಡೆದ ಹಸಿರುಕ್ರಾಂತಿ ಹರಿಕಾರ ಡಾ. ಬಾಬು ನವಜೀವನರಾಮ್ ರವರ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಅವ ಮಾತನಾಡಿದರು.



ಸಾಮಾಜಿಕ ಹೋರಾಟಗಾರ, ಸ್ವಾತಂತ್ರ್ಯ ಹೋರಾಟಗಾರ, ಭಾರತ ದೇಶ ಕಂಡ ಶೋಷಿತರ ಧೀಮಂತ ನಾಯಕ ಡಾ. ಬಾಬು ಜಗಜೀವನರಾಮ್ ರವರು, ತಮ್ಮ ಶೈಕ್ಷಣಿಕ ಜೀವನದಲ್ಲಿ ರಾಷ್ಟ್ರ ಪ್ರೇಮ ಮತ್ತು ಅಭಿವೃದ್ಧಿಪರ ವಿಷಯಗಳ ಬಗ್ಗೆ ಪಾಂಡಿತ್ಯ ಹೊಂದಿದ್ದ ವ್ಯಕ್ತಿಯಾಗಿದ್ದರು ಎಂದು ಶಾಸಕ ಶಾಸಕ ಆಸೀಫ್ (ರಾಜು) ಸೇಠ ಹೇಳಿದರು.

ಈ ವೇಳೆ ವಿಶೇಷ ಉಪನ್ಯಾಸ ನೀಡಿದ ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯದ ಅರ್ಥಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕ ಡಾ. ಅರ್ಜುನ ಜಂಬಗಿ

ಅವರು ಶೋಷಿತ ಸಮುದಾಯಗಳ ಸಮಸ್ಯೆಗಳನ್ನು ಬಗೆಹರಿಸಲು ರಾಷ್ಟ್ರ ಮಟ್ಟದಲ್ಲಿ ಸಂಘಟನೆ ಕಟ್ಟಿ ಹೋರಾಟದ ಮಾಹಾನ ಹೋರಾಟಗಾರ ರಾಮ್ ಅವರು ಮೇಲು–ಕೀಳು ಎಂಬ ತಾರತಮ್ಯವನ್ನು ಹೋಗಲಾಡಿಸಲು ತಮ್ಮದೇಯಾದ ಗುರಿ ಇಟ್ಟುಕೊಂಡ ನಾಯಕರಾಗಿದ್ದರು ಎಂದು ತಿಳಿಸಿದರು.

1936ರ ಬಿಹಾರ ಶಾಸನ ಸಭೆಗೆ ಆಯ್ಕೆಯಾಗಿ ತಮ್ಮ ರಾಜಕೀಯ ಜೀವನಕ್ಕೆ ಕಾಲಿಡುತ್ತಾರೆ, ತಮ್ಮ ರಾಜಕೀಯ ಜೀವನದುದ್ದಕ್ಕೂ ತಮಗೆ ಕೊಟ್ಟಂತಹ ಎಲ್ಲಾ ಕೆಲಸಗಳನ್ನು ಶ್ರದ್ಧಾಪೂರ್ವಕವಾಗಿ ದೇಶದ ಸಮಗ್ರ ಅಭಿವೃದ್ಧಿಗೆ ಡಾ. ಬಾಬು ಜಗಜೀವನರಾಮ್ ನಿರಂತರವಾಗಿ ದುಡಿದಿದ್ದಾರೆ.

31 ವರ್ಷಗಳ ಕಾಲ ಕೇಂದ್ರ ಸರಕಾರದಲ್ಲಿ ಕಾರ್ಯ ನಿರವಹಿಸಿದ ಏಕೈಕ ವ್ಯಕ್ತಿ ಇವರಾಗಿದ್ದು, ಕೃಷಿ ಕ್ಷೇತ್ರದಲ್ಲಿ ಮಹಾನ ಕಾರ್ಯ ಮಾಡಿ ದೇಶದ ಅಭಿವೃದ್ಧಿಗೆ ಸಹಾಯ ಮಾಡಿದ ನಾಯರು. ವಿಶೇಷ ತಳಿಯ ಭತ್ತ ಮತ್ತು ಗೋದಿ ಬೀಜಗಳನ್ನು ಬೇರೆದೇಶಗಳಿಂದಆಮದುಮಾಡಿಕೊಂಡು ಅಲ್ಪ ಅವಧಿಯಲ್ಲಿ ಕೃಷಿ ಕ್ಷೇತ್ರದಲ್ಲಿ ಬಹಳಷ್ಟು ಲಾಭಗೊಳಿಸಿ ದೇಶದ ಜನರಿಗೆ ಹಸಿವು ನೀಗಿಸುವ ಕಾರ್ಯವನ್ನು ತಮ್ಮ ಅಧಿಕಾರ ಅವಧಿಯಲ್ಲಿ ಮಾಡಿ ಹಸಿರು ಕ್ರಾಂತಿಯ ಹಾರಿಕಾರ ಎಂದು ಪ್ರಸಿದ್ಧಿ ಪಡೆದ ರಾಷ್ಟ್ರ ನಾಯಕರು ಎಂದು ಡಾ. ಅರ್ಜುನ ಜಂಬಗಿ ಅವರು ಉಪನ್ಯಾಸ ನೀಡಿದರು.

ಮಹಾನಗರ ಪಾಲಿಕೆಯ ಮಹಾ ಪೌರರಾದ ಮಂಗೇಶ ಪವಾರ, ಉಪ ಮಹಾ ಪೌರರಾದ ವಾಣಿ ವಿಲಾಸ ಜೋಶಿ,

ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಹೆಚ್ಚುವರಿ ಪೊಲೀಸ ವರಿಷ್ಠಾಧಿಕಾರಿ ಆರ್ಬಿ. ಬಸರಗಿ, ಉಪ ಆಯುಕ್ತರಾದ ಉದಯಕುಮಾರ ತಳವಾರ, ನಗರ ಸೇವಕರಾದ ಶ್ರೇಯಸ್ಸ, ಸಮಾಜಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ರಾಮನಗೌಡ ಕನ್ನೊಳ್ಳಿ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಬಸವರಾಜ ಕುರಿಹುಲಿ, ವಾಲ್ಮಿಕಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ಬಸವರಾಜ, ಕ್ರೀಡಾ ಇಲಾಖೆಯ ಉಪ ನಿರ್ದೇಶಕ ಶ್ರೀನಿವಾಸ ಬಿ, ಸಮಾಜದ ಮುಖಂಡರಾದ ಮಲ್ಲೇಶ ಚೌಗಲಾ ಸೇರಿದಂತೆ ಮತ್ತಿತರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಭವ್ಯ ಮೆರವಣಿಗೆ:

ಇದಕ್ಕೂ ಮುಂಚೆ ಹಸಿರುಕ್ರಾಂತಿ ಹರಿಕಾರ, ರಾಷ್ಟ್ರ ನಾಯಕ, ಭಾರತದ ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನರಾಮ್ ಜನ್ಮದಿನಾಚರಣೆ ನಿಮಿತ್ಯ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಡಾ. ಬಾಬು ಜಗಜೀವನರಾಮ್ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಮೆರವಣಿಗೆಗೆ ಚಾಲನೆ ನೀಡಲಾಯಿತು.

ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಿಂದ ಪ್ರಾರಂಭವಾದ ಮೆರವಣಿಗೆ ನಗರದ ಚನ್ನಮ್ಮ ವೃತ್ತ, ಅಯೋಧ್ಯ ನಗರ, ಸದಾಶಿವ ನಗರ ಮಾರ್ಗವಾಗಿ ಸಂಗಮೇಶ್ವರ ನಗರದ ಡಾ. ಬಾಬು ಜಗಜೀವನರಾಮ್ ಉದ್ಯಾನವನದವರೆಗೆ ತಲುಪಿಸಿತು. ಮೆರವಣಿಗೆಯಲ್ಲಿ ಡೊಳ್ಳು ಕುಣಿತ, ವೀರಗಾಸೆ ಸೇರಿದಂತೆ ವಿವಿಧ ಕಲಾ ತಂಡಗಳ ಭಗಹಿಸಿದ್ದವು.

ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್. ಬಿ ಬಸರಗಿ, ಮಹಾನಗರ ಪಾಲಿಕೆ ಆಯುಕ್ತರಾದ ಶುಭ. ಬಿ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ರಾಮನಗೌಡ ಕನ್ನೊಳ್ಳಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ,

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಆರ್. ನಾಗರಾಜ್, ಸಮಾಜದ ಮುಖಂಡರಾದ ಮಲ್ಲೇಶ ಚೌಗಲಾ ಸೇರಿದಂತೆ ಮತ್ತಿತರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

# ಸರ್ಕಾರಿನೌಕರರುತಮ್ಮ ಖಾತೆಯನ್ನುಸ್ಯಾಲರಿಪ್ಯಾಕೇಜ್ ಅಕೌಂಟ್ ಆಗಿಪರಿವರ್ತಿಸಿ ಆ್ಯಕ್ಸಿಡೆಂಟಲ್ & ಟರ್ಮ್ ಇನ್ಸೂರೆನ್ಸ್ ಯೋಜನೆಯಡಿ ನೋಂದಾಯಿಸಿ: ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ



**ಕೊಪ್ಪಳ :** ಸರ್ಕಾರಿ ಕಚೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ, ಸಿಬ್ಬಂದಿಗಳು ತಮ್ಮ ಸ್ಯಾಲರಿ ಅಕೌಂಟ್ ಅನ್ನು ಸ್ಯಾಲರಿ ಪ್ಯಾಕೇಜ್ ಅಕೌಂಟ್ ಆಗಿ ಪರಿವರ್ತಿಸಬೇಕು ಹಾಗೂ ಆ್ಯಕ್ಸಿಡೆಂಟಲ್ ಮತ್ತು ಟರ್ಮ್ ಇನ್ಸೂರೆನ್ಸ್ ಯೋಜನೆಗಳ ಅಡಿಯಲ್ಲಿ ನೋಂದಾಯಿಸಿಕೊಳ್ಳಬೇಕು ಎಂದು ಕೊಪ್ಪಳ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ತಿಳಿಸಿದ್ದಾರೆ.

ಸರ್ಕಾರವು ಸರ್ಕಾರಿ ಕಚೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವನೌಕರರುಮತ್ತುಅವಲಂಬಿತ ಕುಟುಂಬ ಸದಸ್ಯರ ಹಿತಾಸಕ್ತಿಗಳನ್ನು ರಕ್ಷಿಸುವ ಸಲುವಾಗಿ ಕೆಲ ಅಂಶಗಳಲ್ಲಿ ಆದೇಶಿಸಲಾಗಿದ್ದು, ವಿವಿಧ ಬ್ಯಾಂಕುಗಳು ಒದಗಿಸುವ "ಸಂಬಳ ಪ್ಯಾಕೇಜ್‌ಗಳ" ಅಡಿಯಲ್ಲಿ ಖಾತೆಗಳನ್ನು ತೆರೆಯುವುದು, ಆಯ್ಕೆ ಮಾಡಿಕೊಳ್ಳುವುದನ್ನು ಎಲ್ಲಾ ಅಧಿಕಾರಿ, ನೌಕರರಿಗೆ (ಸರ್ಕಾರಿ, ಸರ್ಕಾರಿ ಸಂಸ್ಥೆಗಳು, ಇತ್ಯಾದಿ) ಈ ಆದೇಶದಲ್ಲಿ ಕಡ್ಡಾಯಗೊಳಿಸಿದೆ. ಅಧಿಕಾರಿ ಮತ್ತು ನೌಕರರ ಸಾಮಾಜಿಕ ಭದ್ರತೆ ಹಿತದೃಷ್ಟಿಯಿಂದ ಬ್ಯಾಂಕ್‌ಗಳು, ಅಂಚೆ ಕಚೇರಿಗಳು ನೀಡುವ ಪಿ.ಎಂ.ಜೆ.ಜೆ.ಬಿ.ವೈ ಮತ್ತು ಪಿ.ಎಂ.ಎಸ್.ಬಿ.ವೈ ಯೋಜನೆಗಳ ಅಡಿಯಲ್ಲಿ ಸ್ವಯಂಪ್ರೇರಿತ ಆಧಾರದ ಮೇಲೆ ವಿಮಾ ರಕ್ಷಣೆಯನ್ನು ಪಡೆಯಲು ಅಧಿಕಾರಿ, ನೌಕರರನ್ನು ಸಂಬಂಧಪಟ್ಟ ಇಲಾಖೆ ಪ್ರೋತ್ಸಾಹಿಸಬೇಕು. ಬ್ಯಾಂಕ್‌ಗಳು ನೀಡುವ ವಿವಿಧ ಯೋಜನೆಗಳ ಅಡಿಯಲ್ಲಿ ಸ್ವಯಂಪ್ರೇರಿತ ಆಧಾರದ ಮೇಲೆ ವೈಯಕ್ತಿಕ ಅಪಘಾತ ವಿಮಾ ರಕ್ಷಣೆಯನ್ನು ಪಡೆಯಲು ಅಧಿಕಾರಿ, ನೌಕರರನ್ನು ಸಂಬಂಧಪಟ್ಟ ಇಲಾಖೆ ಪ್ರೋತ್ಸಾಹಿಸಬೇಕು ಎಂದು ಸರ್ಕಾರದ ಆದೇಶದಲ್ಲಿ ತಿಳಿಸಲಾಗಿದೆ.

ಸರ್ಕಾರದ ಆದೇಶದನ್ವಯ ಜಿಲ್ಲಾ ಸಂಸ್ಥೆಗಳು ಮತ್ತು ಇಲಾಖೆಗಳ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಕಡ್ಡಾಯವಾಗಿ ತಮ್ಮ ಸ್ಯಾಲರಿ ಅಕೌಂಟ್ (Salary Account) ಅನ್ನು ಸ್ಯಾಲರಿ ಪ್ಯಾಕೇಜ್ ಅಕೌಂಟ್ (Salary Package Account) ಗೆ ಪರಿವರ್ತಿಸಲು ಮತ್ತು ತಮ್ಮ ಸಂಬಳ ಖಾತೆಯ ಬ್ಯಾಂಕ್‌ಗಳ ಮೂಲಕ ಸರ್ಕಾರದಆದೇಶದಲ್ಲಿತಿಳಿಸಲಾಗಿರುವಆ್ಯಕ್ಸಿಡೆಂಟಲ್ (Accidental)ಮತ್ತುಟರ್ಮ್ ಇನ್ಸೂರೆನ್ಸ್(Term Insurance) ಯೋಜನೆಯಡಿ ನೊಂದಾಯಿಸಲು ಪ್ರೇರೇಪಿಸಲು ಆರ್ಥಿಕ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳು ನಿರ್ದೇಶಿಸಿರುತ್ತಾರೆ. ಆದ್ದರಿಂದ ಎಲ್ಲಾ ಇಲಾಖೆಗಳ ಮುಖ್ಯಸ್ಥರು ತಮ್ಮ ಕಚೇರಿ ಹಾಗೂ ತಮ್ಮಅಧೀನಕಚೇರಿಗಳಲ್ಲಿಕರ್ತವ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳು ಕಡ್ಡಾಯವಾಗಿ ಸ್ಯಾಲರಿ ಅಕೌಂಟ್ ಅನ್ನು ಸ್ಯಾಲರಿ ಪ್ಯಾಕೇಜ್ ಅಕೌಂಟ್ ಗೆ ಪರಿವರ್ತಿಸಲು ಕ್ರಮಕೈಗೊಳ್ಳಲು ಮತ್ತು ಸಂಬಳ ಖಾತೆಯ ಬ್ಯಾಂಕ್‌ಗಳ ಮೂಲಕ ಸರ್ಕಾರದ ಆದೇಶದಲ್ಲಿ ತಿಳಿಸಿರುವ ಹಾಗೂ ಆ್ಯಕ್ಸಿಡೆಂಟಲ್ ಮತ್ತು ಟರ್ಮ್ ಇನ್ಸೂರೆನ್ಸ್ ಯೋಜನೆಯಡಿ ನೋಂದಾಯಿಸಿಕೊಳ್ಳಲು ಪ್ರೇರೇಪಿಸಬೇಕು. ಈ ವಿಷಯವನ್ನು ಅತ್ಯಂತ ಜರೂರು ಎಂದು ಪರಿಗಣಿಸಿ ಕೈಗೊಂಡ ಕ್ರಮದ ಬಗ್ಗೆ ವರದಿ ನೀಡುವಂತೆ ಪ್ರಕಟಣೆ ತಿಳಿಸಿದೆ.

# ಗದಗ: 'ಕರಾಸ್ತ್ರ' ಚಲನಚಿತ್ರ ಶೀಘ್ರವೇ ಬಿಡುಗಡೆ

**ಗದಗ :** ಶ್ರೀ ಶಿವಶಕ್ತಿ ಸಿನಿ ಕಂಬೈನ್ಸ್ ಮೂಲಕ ಪ್ರಥಮ ಕಾಣಿಕೆಯಾಗಿ 'ಕರಾಸ್ತ್ರ' ಕನ್ನಡ ಚಲನಚಿತ್ರ ಉತ್ತರ ಕರ್ನಾಟಕದ ಕಲಾವಿದರನ್ನು ಸೇರಿಸಿಕೊಂಡು ನಿರ್ಮಿಸಲಾಗಿದೆ .ಇದೀಗ ಈ ಚಿತ್ರದ ಟ್ರೈಲರ್ ಮತ್ತು ಲಿರಿಕಲ್ ವಿಡಿಯೋ ಸಾಂಗ್ ನಗರದ ವಿದ್ಯಾದಾನ ಶಿಕ್ಷಣ ಸಮಿತಿ ಮೈದಾನದಲ್ಲಿನಡೆಯುತ್ತಿರುವ ಕರಾಟೆ ಬೆಲ್ಟ್ ವಿತರಣಾ ಕಾರ್ಯಕ್ರಮದಲ್ಲಿ ಬಿಡುಗಡೆ ಮಾಡುತ್ತಿದ್ದೇವೆ ಎಂದು ನಿರ್ದೇಶಕ ನಾರಾಯಣ ಪೂಜಾರ ಹೇಳಿದರು.

ಪತ್ರಿಕಾಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ದ್ವಾಪರ ಯುಗದಲ್ಲಿ ನಡೆದ ಘಟನೆಯ ಬಗೆಗಿನ ಪ್ರಶ್ನಾರ್ಥಕ ವಿಷಯಗಳ ಬೆನ್ನತ್ತಿ ಕಥೆ ಸಾಗುತ್ತದೆ. ಮತ್ತು ಹೆಣ್ಣು ಮನಸ್ಸು ಮಾಡಿದರೆ ಏನದ್ರೂ ಸಾಧಿಸಬಲ್ಲಳು ಎಂಬುದನ್ನು ತೋರಿಸಲಾಗಿದೆ . ಪಾತ್ರದಲ್ಲಿ ರಿಯಲ್ ಕರಾಟೆ ಪಟುಗಳು ಮತ್ತು ನಾಲ್ವರು ರಂಗಭೂಮಿ ಕಲಾವಿದರು ಅಭಿನಯಿಸಿದ್ದಾರೆ. ಹುಬ್ಬಳ್ಳಿ, ಬ್ಯಾಡಗಿ, ಗದಗ, ಹಾವೇರಿ ಸುತ್ತಮುತ್ತ ಚಿತ್ರೀಕರಣ ನಡೆಸಲಾಗಿದ್ದು ಕತೆ, ಚಿತ್ರಕತೆ, ಸಾಹಿತ್ಯ ಮತ್ತು ನಿರ್ಮಾಣದ ಜವಾಬ್ದಾರಿಯನ್ನು ನಾನೇ ನಿರ್ವಹಿಸಿದ್ದೇನೆ .ಚಿತ್ರವನ್ನು ಶೀಘ್ರದಲ್ಲೇ ರಾಜ್ಯಾದ್ಯಂತ ಬಿಡುಗಡೆ ಮಾಡುತ್ತೇವೆ ಎಂದರು.

ಉತ್ತರ ಕರ್ನಾಟಕದ ಕಲಾವಿದರು ಬೆಳೆಯಬೇಕು ಎನ್ನುವ ಉದ್ದೇಶ ಇಟ್ಟುಕೊಂಡಿರುವಚಿತ್ರತಂಡವನ್ನುಪ್ರೇಕ್ಷಕರು ಚಿತ್ರಮಂದಿರದಲ್ಲಿ ಚಲನಚಿತ್ರವನ್ನು ನೋಡಿ ಪ್ರೋತ್ಸಾಹಿಸಬೇಕು ಎಂದು ಶ್ರೀನಿವಾಸ ಹುಯಿಲಗೋಳ ಹೇಳಿದರು.

ತಾರಾಗಣದಲ್ಲಿ ನಾರಾಯಣ ಪೂಜಾರ, ಕ್ಷಿತಿ ವೀರಣ್ಣ, ಬೇಬಿ ಸಾಕ್ಷಿ, ಕಾರ್ತಿಕ ಪೂಜಾರ, ಮನಿಷಾ ಕಬ್ಬೂರ, ಬೇಬಿ ಕೃಷ್ಣವೇಣಿ, ಹನುಮಂತ, ಮಾಲತೇಶ ಸುಂಕದ, ಅಬ್ದುಲ್ಲ ಮುನ್ನಾ ಎರೇಸೀಮೆ , ಬಸವರಾಜ ಹೊಂಬಾಳೆ, ಭುವನಾ, ವಿದ್ಯಾ ಬೆಳಗಾಂವ, ಹೀತೇಶ, ವಿಜಯಕುಮಾರ ನಾಗರತ್ನ ಮೊದಲಾದವರು ಅಭಿನಯಿಸಿದ್ದಾರೆ , ತಾಂತ್ರಿಕ ವರ್ಗದಲ್ಲಿ ಸಹಾಯಕ ನಿರ್ದೇಶಕರಾಗಿ ಸತೀಶ ಕ್ಯಾತನಘಟ್ಟ, ಕಣಿವೆಪ್ಪ, ಬಿ.ಪವನ ಕುಲಕರ್ಣಿ, ಛಾಯಾಗ್ರಹಣ ಶರಣು ಸುಗ್ನಳ್ಳಿ, ಲಕ್ಷ್ಮಣ, ಮೈಲಾರಿ, ಗಗನ, ಸ್ಥಿರಚಿತ್ರಣ ವಿನ್ಸೆಂಟ್ ಪರೇರಾ, ಸಂಕಲನ ಶರಣು ಸುಗ್ನಳ್ಳಿ, ಅಮಿತ್ ಬಳ್ಳಾರಿ, ಸಂಗೀತ ಮಹಾರಾಜ್, ರಾಜ್ ಭಾಸ್ಕರ್, ಕರಾಟೆ ಮಂಜು , ಶಂಕರ ಶಾಸ್ತ್ರಿ ಸಾಹಸ, ನೃತ್ಯ ವಿನಾಯಕ, ಕಲಾ ನಿರ್ದೇಶನ ಶಾಂತಯ್ಯ ಪರಡಿಮಠ, ವಸ್ತ್ರಾಲಂಕಾರ ಹಾಗೂ ಪ್ರಸಾಧನ ಬಿ.ಎಚ್.ನಯನಾ, ಪತ್ರಿಕಾ ಸಂಪರ್ಕ, ಡಾ.ಪ್ರಭು ಗಂಜಿಹಾಳ, ಡಾ.ವೀರೇಶ್ ಹಂಡಿಗಿ ಅವರದಿದೆ .

ಈ ಸಂದರ್ಭದಲ್ಲಿ ಚಲನಚಿತ್ರದ ಪೋಸ್ಟರ್ ಬಿಡುಗಡೆ ಮಾಡಲಾಯಿತು. ಸುದ್ದಿಗೋಷ್ಠಿಯಲ್ಲಿ ಗದಗನಗರದ ನಾಯಕ ನಟಿ ಮನಿಷಾ ಕಬ್ಬೂರ, ಬಸವರಾಜ್ ಹೊಂಬಾಳಿ, ಶ್ರೀನಿವಾಸ ಹುಯಿಲಗೋಳ, ಮಂಜುನಾಥ ಕರಾಟೆ ಶಿಕ್ಷಕರು, ಡಾ.ಪ್ರಭು ಗಂಜಿಹಾಳ ಮತ್ತು ಚಿತ್ರತಂಡದವರು ಉಪಸ್ಥಿತರಿದ್ದರು.

**–ಡಾ.ಪ್ರಭು ಗಂಜಿಹಾಳ**
**ಮೊ:9448775346**

# ಭಾರತೀಯ ರೆಡ್ ಕ್ರಾಸ್ ಸಂಸ್ಥೆಗೆ ಸಭಾಪತಿಯಾಗಿ ರಾಜೀವ ಶೆಟ್ಟಿ, ಉಪಸಭಾಪತಿಯಾಗಿ ಕೊಪ್ಪಳದ ಶ್ರೀನಿವಾಸ ಹ್ಯಾಟಿ ಆಯ್ಕೆ



**ಕೊಪ್ಪಳ:** ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಬೆಂಗಳೂರು ರಾಜ್ಯಶಾಖೆಗೆ ಮೂರು ವರ್ಷಗಳ ಅವಧಿಗೆ ಸಭಾಪತಿ ಹಾಗೂ ಉಪಸಭಾಪತಿ ಹುದ್ದೆಗೆ ಮಂಗಳವಾರ ರೆಡ್ ಕ್ರಾಸ್ ಸಂಸ್ಥೆ ಕಛೇರಿಯಲ್ಲಿ ಚುನಾವಣೆ ಜರುಗಿತು.

ಚುನಾವಣೆಯಲ್ಲಿಸಭಾಪತಿಯಾಗಿಉಡುಪಿಶಾಖೆಯ ರಾಜೀವ ಶೆಟ್ಟಿ ಹಾಗೂ ಉಪಸಭಾಪತಿಯಾಗಿ ಕೊಪ್ಪಳ ಶಾಖೆಯ ಡಾ. ಶ್ರೀನಿವಾಸ ಹ್ಯಾಟಿ ಆಯ್ಕೆಯಾಗಿದ್ದಾರೆ. ಸಭಾಪತಿ ಹುದ್ದೆಗೆ ಮೂರು ಜನ ಆಕಾಂಕ್ಷಿಗಳು ಸ್ಪರ್ಧಿಸಿದ್ದರು. ಉಪ ಸಭಾಪತಿ ಹುದ್ದೆಗೆ ಇಬ್ಬರು ಸ್ಪರ್ಧಿಸಿದ್ದರು. ಒಟ್ಟು 30 ಸದಸ್ಯರು ತಮ್ಮ ಮತ ಚಲಾಯಿಸಿದರು. ಅದರಲ್ಲಿ ಸಭಾಪತಿ ಆಯ್ಕೆಯಲ್ಲಿ ಬಾಗಲಕೋಟೆ ಶಾಖೆಯ ಆನಂದ ಜಿಗಜಿನ್ನಿ, ಶಿವಮೊಗ್ಗ ಶಾಖೆಯ ಎಸ್.ಪಿ. ದಿನೇಶ ಹಾಗೂ ಉಡುಪಿಶಾಖೆಯಬಸ್ರೂರುರಾಜೀವಶೆಟ್ಟಿಈಮೂರು ಜನರೂ ತಲಾ 10 ಮತಗಳನ್ನು ಪಡೆದರು. ಇದರಲ್ಲಿ ಕೊನೆಗೆ ಚೀಟಿ ಎತ್ತಿದಾಗ ಉಡುಪಿ ಶಾಖೆಯ ಬಸ್ರೂರು ರಾಜೀವ ಶೆಟ್ಟಿ ಸಭಾಪತಿಯಾಗಿ ಆಯ್ಕೆಯಾದರು. ಉಪ ಸಭಾಪತಿಗೆ ಇಬ್ಬರು ಸ್ಪರ್ಧಿಸಿದ್ದರು. ಇದರಲ್ಲಿ ಬಳ್ಳಾರಿಯ ಎಂ.ಎ. ಶಕೀಬ್ 11 ಮತಗಳನ್ನು ಪಡೆದರೆ, ಕೊಪ್ಪಳ ಶಾಖೆಯ ಡಾ.ಶ್ರೀನಿವಾಸ ಹ್ಯಾಟಿ 19 ಮತಗಳನ್ನು ಪಡೆದು ಜಯಶಾಲಿಯಾಗಿದ್ದಾರೆ. ಡಾ.ಶ್ರೀನಿವಾಸ ಹ್ಯಾಟಿ ಇವರ ಆಯ್ಕೆಗೆ ಕೊಪ್ಪಳ ಭಾರತೀಯ ರೆಡ್ ಕ್ರಾಸ್ ಪದಾಧಿಕಾರಿಗಳು, ಸ್ನೇಹಿತರು ಹರ್ಷ ವ್ಯಕ್ತಪಡಿಸಿದ್ದಾರೆ.

# ಕೊಪ್ಪಳ ಜಿಲ್ಲಾ ಕ್ರೀಡಾ ವಸತಿ ನಿಲಯದಲ್ಲಿ ಪಾಲಕರ ಸಭೆ: ಸಾಧಕ ಕ್ರೀಡಾಪಟುಗಳಿಗೆ ಸನ್ಮಾನ

**ಕೊಪ್ಪಳ :** ಜಿಲ್ಲಾ ಕ್ರೀಡಾಂಗಣದಲ್ಲಿ ಇತ್ತೀಚೆಗೆ ನಡೆದ ಕೊಪ್ಪಳ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಅಧೀನದಲ್ಲಿರುವ ಜಿಲ್ಲಾ ಕ್ರೀಡಾ ವಸತಿ ನಿಲಯದ ಕ್ರೀಡಾಪಟುಗಳ ಪಾಲಕರ ಸಭೆಯಲ್ಲಿ ಸಾಧಕ ಕ್ರೀಡಾಪಟುಗಳಿಗೆ ಸನ್ಮಾನಿಸಲಾಯಿತು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ವಿಠ್ಠಲ ಜಾಬಗೌಡರ್ ಅವರು ಈ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಕ್ರೀಡಾಪಟುಗಳು ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಸಾಧನೆ ಮಾಡಿರುತ್ತಾರೆ. ಉತ್ತಮ ರೀತಿಯಲ್ಲಿ ಕ್ರೀಡಾ ಸಾಧನೆ ಮಾಡಿ ಜಿಲ್ಲೆಗೆ ಕೀರ್ತಿ ತಂದಿರುತ್ತಾರೆ. ಕ್ರೀಡಾ ಇಲಾಖೆಯಿಂದ ಕ್ರೀಡಾಪಟುಗಳಿಗೆ ನೀಡಲಾಗುವ ಕ್ರೀಡಾ ಸೌಲಭ್ಯಗಳಾದ ನುರಿತ ಎನ್‌ಐಎಸ್ ತರಬೇತುದಾರರಿಂದ ದೈನಂದಿನ ಕ್ರೀಡಾ ತರಬೇತಿ ನೀಡುವುದು, ಕ್ರೀಡಾ ತರಬೇತಿಗೆ ಅವಶ್ಯಕ ಉನ್ನತ ಸಾಮಾಗ್ರಿ, ಅಲ್ಲದೇ ಕ್ರೀಡಾ ಸಾಮಾಗ್ರಿಗಳಾದ ಟ್ರ್ಯಾಕ್‌ಶ್ಯೂಟ್ ಟೀಶರ್ಟ್ಸ್, ಶ್ಯೂ ಇನ್ನಿತರೆ ಸಾಮಾಗ್ರಿ, ನುರಿತ ಶಿಕ್ಷಕರಿಂದ ಟ್ಯೂಷನ್ ನೀಡಲಾಗುವುದು. ಪೌಷ್ಠಿಕಾಂಶಯುಕ್ತ ಊಟೋಪಹಾರವನ್ನು ನೀಡಲಾಗುವುದು. ಒಳಾಂಗಣ ಕ್ರೀಡಾಂಗಣ, ಜಿಮ್ ಹಾಗೂ ಈಜುಕೊಳ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದು ಮಾಹಿತಿಯನ್ನು ನೀಡಿದರು.



ಅಥ್ಲೆಟಿಕ್ಸ್ ಕ್ರೀಡೆಗಳಲ್ಲಿ ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಪ್ರತಿನಿಧಿಸಿ ಕ್ರೀಡಾ ಸಾಧನೆಗೈದ ಕ್ರೀಡಾಪಟುಗಳಾದ ಜಗದೀಶ, ರಾಹುಲ್, ಪ್ರಜ್ವಲ್, ಸಂಗೀತಾ, ವಿದ್ಯಾ ಮತ್ತು ವಾಲಿಬಾಲ್ ಕ್ರೀಡಾಪಟುಗಳಾದ ಶಿಲ್ಪಾ, ಸ್ಫೂರ್ತಿ, ಶಾರದಾ, ದುರಗಮ್ಮ, ಅನಿತಾ, ಕಾವೇರಿ, ಭೂಮಿಕಾ, ಪೂಜಾ, ಶಶಾಂಕ್, ಮೋಹನ್, ವಿಜಯ್, ಕಾಸಿಂಸಾಬ, ಗುರುನಾಥ, ಯಮನೂರ ಇಲಾಖೆಯಿಂದ ಈ ಎಲ್ಲಾ ಕ್ರೀಡಾಪಟುಗಳಿಗೆ ಸನ್ಮಾನಿಸಲಾಯಿತು.

ಈ ಸಂಧರ್ಭದಲ್ಲಿ ಖೋಖೋ ತರಬೇತುದಾರರಾದ ಎ.ಎನ್.ಯತಿರಾಜು, ಅಥ್ಲೆಟಿಕ್ಸ್ ತರಬೇತುದಾರರಾದ ರೋಹಿಣಿ ಪರ್ವತಿಕರ್, ವಿಷಯ ನಿರ್ವಾಹಕರಾದ ಬಿ.ಕೀರ್ತಿವರ್ಧನ್, ವಾಲಿಬಾಲ್ ತರಬೇತುದಾರರಾದ ಸುರೇಶ ಹಾಗೂ ಕಮಲ್ ಸಿಂಗ್ ಬಿಶ್ಟ್, ಅಥ್ಲೆಟಿಕ್ಸ್ ತರಬೇತುದಾರರಾದ ವಿಶ್ವನಾಥ ಕರ್ಲಿ, ಖೇಲೋ ಇಂಡಿಯಾ ವಾಲಿಬಾಲ್ ತರಬೇತಿದಾರರು ದೀಪಾ, ಕಚೇರಿ ಸಿಬ್ಬಂದಿಗಳಾದ ಹನುಮೇಶ ಪೂಜಾರ, ತುಕಾರಾಮ ರಂಜಪಲ್ಲಿ, ಲಕ್ಷ್ಮೀ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ವಸತಿ ನಿಲಯಗಳಿಗೆ ನಗರಸಭೆ ಯಿಂದ ಸಾಮಾಗ್ರಿ ವಿತರಣೆ

## ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಿ–ಪಟೇಲ್



**ಕೊಪ್ಪಳ :** ನಗರಸಭೆ ವತಿಯಿಂದ ನಗರದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ನಗರದ ಐದು ವಸತಿ ನಿಲಯ ಗಳಿಗೆ 7.25 ಯೋಜನೆ ಅಡಿಯಲ್ಲಿ ಅಗತ್ಯ ಸಾಮಗ್ರಿಗಳನ್ನು ವಿತರಣೆ ಮಾಡುವ ಕಾರ್ಯಕ್ರಮ ನಗರಸಭೆಯ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದು ಅಧ್ಯಕ್ಷರಾದ ಅಮ್ಜದ್ ಪಟೇಲ್ ರವರು ವಿತರಣೆ ಮಾಡಿ ಮಾತನಾಡಿದರು,

ಹಿಂದುಳಿದ ವರ್ಗಗಳ ವಿಭಾಗದ ವಸತಿ ನಿಲಯಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಅನುಕೂಲಕ್ಕಾಗಿ 7.25 ಯೋಜನೆ ಅಡಿಯಲ್ಲಿ ಅಗತ್ಯ ಸಾಮಗ್ರಿಗಳಾದ ಕಂಪ್ಯೂಟರ್ ಚೇರ್ ಗಳು ಊಟ ಮಾಡುವ ಗ್ಲಾಸ್ ಗಳು, ಟೇಬಲ್ ಗಳು, ಸೇರಿದಂತೆ ಅಗತ್ಯ ವಸ್ತುಗಳ ಸಾಮಗ್ರಿಗಳನ್ನು ಅಧ್ಯಕ್ಷರಾದ ಅಮ್ಜದ್ ಪಟೇಲ್ ಅವರು ನಗರ ಸಭೆ ಪರವಾಗಿ ವಿತರಣೆ ಮಾಡಿ ಮಾತನಾಡಿ ವಸತಿ ನಿಲಯಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ಅವರು ಸಲಹೆ ನೀಡಿದರು,

ಈ ಸಂದರ್ಭದಲ್ಲಿ ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷರಾದ ಅಕ್ಬರ್ ಪಾಷಾ ಪಲ್ಟನ್ ಪೌರಾಯುಕ್ತ ಗಣಪತಿ ಪಾಟೀಲ್ ಹಿಂದುಳಿದ ವರ್ಗಗಳ ಇಲಾಖೆಯ ತಾಲೂಕ ಅಧಿಕಾರಿ ಗಳಾದ ರಮೇಶ ಹುಬ್ಬಳ್ಳಿ ಶಿವಶಂಕರ್ ನಗರಸಭೆಯ ಕಿರಿಯ ಅಭಿಯಂತ ಸೋಮಲಿಂಗಪ್ಪ ವ್ಯವಸ್ಥಾಪಕ ಮುನಿಸ್ವಾಮಿ, ವಸತಿ ನಿಲಯಗಳ ನಿಲಯ ಪಾಲಕರು, ವಸತಿ ನಿಲಯದ ಮತ್ತು ನಗರಸಭೆಯ ಸಿಬ್ಬಂದಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಬೇವಿನಹಳ್ಳಿ–ನೂತನ ಉಪಾಧ್ಯಕ್ಷರಾಗಿ ನಾಗರಾಜ ಬಹದ್ದೂರಬಂಡಿ

**ಹುಲಿಗಿ :** ಸಮೀಪದ ಬೇವಿನಹಳ್ಳಿ ಗ್ರಾಮ ಪಂಚಾಯತಗೆ ಇತ್ತೀಚಿಗೆ ತೆರವಾಗಿದ್ದ ಸಾಮಾನ್ಯ ಮೀಸಲಾತಿ ಉಪಾಧ್ಯಕ್ಷ ಹುದ್ದೆಗೆ ಬುಧವಾರ ಚುನಾವಣೆ ಜರುಗಿತು. 14ಜನರ ಸದಸ್ಯಬಲಬಲಾ ಹೊಂದಿರುವ ಬೇವಿನಹಳ್ಳಿ ಗ್ರಾಮ ಪಂಚಾಯತ್ ಉಪಾಧ್ಯಕ್ಷರಾಗಿ ಬೇವಿನಹಳ್ಳಿ ಗ್ರಾಮದ ನಾಗರಾಜ ಬಹದ್ದೂರಬಂಡಿ ಅವಿರೋಧವಾಗಿ ಆಯ್ಕೆಯಾದರು ಎಂದು ಚುನಾವಣೆ ಅಧಿಕಾರಿ ಕೊಪ್ಪಳ ತಹಸೀಲ್ದಾರ್ ವಿಠಲ್ ಚೌಗಳಿ ಫಲಿತಾಂಶ ಪ್ರಕಟಣೆ ಮಾಡಿದರು.

ಲಿಂಗದಹಳ್ಳಿ ಗ್ರಾಮದ ಮುರುಳಿದರ್ ಬಸಿರಾಳ ಅವರ ರಾಜೀನಾಮೆಯಿಂದ ತೆರವಾಗಿದ್ದ ಉಪಾಧ್ಯಕ್ಷ. ಸಾಮಾನ್ಯ ಮೀಸಲಾತಿ ಸ್ಥಾನಕ್ಕೆ ಬುಧವಾರ ನಿಗದಿತ ಅವಧಿಯೊಳಗೆ ನಾಗರಾಜ್ ಅವರ ನಾಮಪತ್ರ ಹೊರತುಪಡಿಸಿ ಉಳಿದ ಯಾವ ಸದಸ್ಯರು ಕೂಡ ನಾಮಪತ್ರ ಸಲ್ಲಿಸದೆ ಇರುವರಿಂದ ನಾಗರಾಜ್ ಅವರನ್ನು ಅವಿರೋಧ ಆಯ್ಕೆ ಆಗಿದ್ದಾರೆ ಎಂದರು,

ಅವಿರೋಧವಾಗಿ ಆಯ್ಕೆಗೆ ಸಹಕಾರ ನೀಡಿದ ಗ್ರಾಮ ಪಂಚಾಯತ್ ಅಧ್ಯಕ್ಷ ರಿಗೆ, ಎಲ್ಲ ಸದಸ್ಯರಿಗೆ ಹಾಗೂ ಬಂಧುಗಳಿಗೆ ನೂತನ ಉಪಾಧ್ಯಕ್ಷ ಧನ್ಯವಾದಗಳನ್ನು ತಿಳಿಸಿ




ಮಾತನಾಡಿದ ಅವರು ನಮ್ಮ ಪಂಚಾಯತ್ ವ್ಯಾಪ್ತಿಯ ಜನರಿಗೆ ಮೂಲಬೂತ ಸೌಲಭ್ಯ ಒದಗಿಸಿಕೊಡುವಲ್ಲಿ ಮೊದಲ ಆದ್ಯತೆ ನೀಡುತ್ತೇನೆ ಎಂದು ನೂತನ ಉಪಾಧ್ಯಕ್ಷ ನಾಗರಾಜ್ ಬಹದ್ದೂರಬಂಡಿ ಹೇಳಿದರು.

ಗ್ರಾಮ ಪಂಚಾಯತ ಅಧ್ಯಕ್ಷರಾದ ತಿಪ್ಪವ್ವ ಶಿವಪ್ಪ ನಾಯಕ ಮರುಳಿದರ್, ಅಭಿವೃದ್ಧಿ ಅಧಿಕಾರಿ ಗೀತಾಕುಮಾರಿ, ಕಾರ್ಯದರ್ಶಿ ಶಿವಾನಂದಪ್ಪ ಪಂಥರ್ ಸದಸ್ಯರಾದ ಯಂಕನಗೌಡ ಪಾಟೀಲ್, ಹಾಲಪ್ಪ ಶಹಪುರ್,

ಹನುಮಂತಪ್ಪ ಗೊಲ್ಲರ, ಶಿವಮೂರ್ತಿ ಮೂಲಿಮನಿ, ಶಾಂತಮ್ಮ ಕೃಷ್ಣಪ್ಪ ಮಡ್ಡಿ, ಪಾರ್ವತಿ ಮಾರುತಿ ಬಹದ್ದೂರಬಂಡಿ, ಸುಮಂಗಲ ನಿಂಗಪ್ಪ ಶಹಪುರ, ,ಹೊನ್ನವ್ವ ದೇವೇಂದ್ರ ಲಿಂಗದಹಳ್ಳಿ, ಪದ್ಮಾವತಿ ನಾಗರಾಜ್, ಗಂಗಮ್ಮ ಶಹಾಪುರ, ಅಂಜಿನಪ್ಪ ಲಿಂಗದಹಳ್ಳಿ, ಗಣ್ಯರಾದ ಮಾರುತಿ ಬಹಾದ್ದೂರ್ ಬಂಡಿ, ನಿಂಗಜ್ಜ ಚೌದರಿ, ನಿಂಗಪ್ಪ ನಾಗಲಾಪುರ, ನಾಗರಾಜ್ ಶಾಪುರ, ಮುದ್ದಪ್ಪ ಬೇವಿನಹಳ್ಳಿ, ಯೋಗಾನಂದ ಲೇಬಗೇರ, ಮಾರುತಿ ಸಿಂದೋಗಿ, ಮರಿಯಪ್ಪ ಹೂವಿನಾಳ, ಭೀಮಣ್ಣ ಮುಲಿಮಲಿ, ಬಸವರಾಜ್ ಸಾಹುಕಾರ್, ಮಾರ್ಕಂಡಪ್ಪ ಅಜಗಾರ್, ಅಮರೇಗೌಡ ಪಾಟೀಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಗಂಗಾವತಿಯಲ್ಲಿ ಕುಡಿಯುವ ನೀರಿನ ಸಹಾಯವಾಣಿ ಕೇಂದ್ರ

**ಕೊಪ್ಪಳ :** ಗಂಗಾವತಿ ತಾಲೂಕಿನ ಗ್ರಾಮೀಣ ಭಾಗದಲ್ಲಿ ಬೇಸಿಗೆ ನಿಮಿತ್ಯ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ತಾಲೂಕಾ ಪಂಚಾಯತಿ ಕಛೇರಿಯಲ್ಲಿ ಸಹಾಯವಾಣಿ ಕೇಂದ್ರ ಆರಂಭಿಸಲಾಗಿದೆ ಎಂದು ತಾಲೂಕ ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

ಸಾರ್ವಜನಿಕರಿಗೆ ಕುಡಿಯುವ ನೀರಿನ ಯಾವುದೇ ಸಮಸ್ಯೆಗಳು ಆಗಬಾರದೆಂಬ ದೃಷ್ಟಿಯಿಂದ, ಬೇಸಿಗೆ ನಿಮಿತ್ಯ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಉಲ್ಬಣಗೊಳ್ಳುವುದರಿಂದ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಮುನ್ನೆಚ್ಚರಿಕೆ ಕ್ರಮವಹಿಸಲು ಹಾಗೂ ತಕ್ಷಣವೇ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಿ ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಸಲುವಾಗಿ ಗಂಗಾವತಿ ತಾ.ಪಂ ಕಾರ್ಯಾಲಯದಲ್ಲಿ ಸಹಾಯವಾಣಿ ಕೇಂದ್ರ ತೆರೆಯಲಾಗಿದೆ.

ತಾಲ್ಲೂಕಿನ ಯಾವುದೇ ಗ್ರಾಮ ಪಂಚಾಯತಿಗಳಲ್ಲಿ ಉಲ್ಬಣಗೊಳ್ಳುವ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಲ್ಲಿ ಸಾರ್ವಜನಿಕರು ಕರೆ ಮಾಡಬಹುದಾಗಿದ್ದು, ಈ ಸಹಾಯವಾಣಿ ಕೇಂದ್ರದಲ್ಲಿ ಕಾರ್ಯನಿರ್ವಹಿಸುವ ದ್ವಿ.ದ.ಲೆ.ಸ ಎಂ.ಸಂತೋಷ ಮೊ.ಸಂ: 6361940327 ಇವರಿಗೆ ಬೆಳಿಗ್ಗೆ 9 ರಿಂದ 1.30 ರವರೆಗೆ ಮತ್ತು ಕಾರ್ಯದರ್ಶಿ ಯಮನೂರಪ್ಪ ಮೊ.ಸಂ: 8197895571 ಇವರಿಗೆ ಮಧ್ಯಾಹ್ನ 2 ರಿಂದ ಸಂಜೆ 7.30 ರವರೆಗೆ ಕರೆ ಮಾಡಿ ದೂರುಗಳನ್ನು ದಾಖಲಿಸಿ, ಕೂಡಲೇ ಕುಡಿಯುವ ನೀರಿನ ಸಮಸ್ಯೆಯನ್ನು ಇತ್ಯರ್ಥ ಪಡಿಸಿಕೊಳ್ಳಬಹುದಾಗಿದೆ ಎಂದು ಗಂಗಾವತಿ ತಾಲೂಕ ಪಂಚಾಯತ್ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ವಕ್ಫ್ ವಿಷದ ಹಲ್ಲು ಕಿತ್ತಿದ ಕೇಂದ್ರ ಸರ್ಕಾರ: ಅಖಂಡ ಕರ್ನಾಟಕ ರೈತ ಸಂಘದ ಸಂಭ್ರಮಾಚರಣೆ




**ವಿಜಯಪುರ :** ದೇಶದ ಅನ್ನದಾತರ ಜಮೀನುಗಳನ್ನು ನುಂಗಿ ನೀರು ಕುಡಿಯಲು ಹೊಂಚು ಹಾಕಿದ ವಕ್ಫ ಬೋರ್ಡ್ನ ವಿಷದ ಹಲ್ಲನ್ನು ಕಿತ್ತಿ ಹೆಡೆಮುರಿ ಕಟ್ಟಿದ ಕೇಂದ್ರ ಸರ್ಕಾರದ ನಿರ್ಣಯಕ್ಕೆ ಅಖಂಡ ಕರ್ನಾಟಕ ರೈತ ಸಂಘ ಹರ್ಷ ವ್ಯಕ್ತಪಡಿಸಿ ಸಂಭ್ರಮಾರಣೆ ಮಾಡಿತು.

ಕೇಂದ್ರದ ಈ ನಿರ್ಧಾರದಿಂದ ರೈತರು ನಿರಾಳರಾಗಿದ್ದು, ಅಖಂಡ ಕರ್ನಾಟಕ ರೈತ ಸಂಘ ದೇಶದಲ್ಲಿಯೇ ಪ್ರಥಮ ಬಾರಿಗೆ ವಿಜಯಪುರ ಜಿಲ್ಲೆಯಿಂದ ಹೋರಾಟ ಪ್ರಾರಂಭಿಸಿ ಕೇಂದ್ರ ಸರ್ಕಾರವನ್ನು ಎಚ್ಚರಗೊಳಿಸುವ ಮೂಲಕ ಕಾನೂನು ತಿದ್ದುಪಡಿ ಮಾಡಿ ವಕ್ಫ ಬೋರ್ಡ್ನ ಸೊಕ್ಕು ಅಡಗಿಸಿದ ಕೇಂದ್ರ ಸರ್ಕಾರಕ್ಕೆ ಅಖಂಡ ಕರ್ನಾಟಕ ರೈತ ಸಂಘದ ವತಿಯಿಂದ ಶುಕ್ರವಾರ ಸಂಭ್ರಮಾಚರಣೆ ನಡೆಸಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ ಶಾ ಹಾಗೂ ಕಿರಣ ರಿಜೂಜು ಅವರಿಗೆ ಅಭಿನಂದನೆ ಸಲ್ಲಿಸಲಾಯಿತು.

ವಿಜಯಪುರದ ಜಿಲ್ಲಾಧಿಕಾರಿ ಕಚೇರಿಯ ಆವರಣದಲ್ಲಿ ಅಖಂಡ ಕರ್ನಾಟಕ ರೈತ ಸಂಘದ ನೇತೃತ್ವದಲ್ಲಿ ಸಿಹಿ ಹಂಚುವ ಮೂಲಕ ಸಂಭ್ರಮ ಪಡಲಾಯಿತು.

ಇನ್ನು ಮುಂದೆ ದೇಶದ ಯಾವೊಬ್ಬ ರೈತರು ವಕ್ಫ ಬೋರ್ಡ್ ಕುರಿತು ಚಿಂತಿಸುವ ಅಗತ್ಯವಿಲ್ಲ. ಕೇಂದ್ರ ಸರ್ಕಾರದ ಕಾನೂನು ತಿದ್ದುಪಡೆ ಹಿನ್ನೆಲೆಯಲ್ಲಿ ಕೆಲವೊಂದು ರಾಜ್ಯಗಳಲ್ಲಿ ಮುಸ್ಲಿಂ ಭಾಂಧವರು ಕೂಡ ಸಂಭ್ರಮ ಆಚರಣೆ ಮಾಡಿದ್ದಾರೆ. ದೇಶದ ಸಂವಿಧಾನದ ಅಡಿಯಲ್ಲಿ ಮತ್ತು ನಮ್ಮ ದೇಶದ ಕಾನೂನು ಅನ್ವಯ ವಕ್ಫ್ ಬದುಕಬೇಕು. ಕೇಂದ್ರ ಸರ್ಕಾರ ವಕ್ಫ್ ಹೆಸರನ್ನು ಕಿತ್ತಿ ಹಾಕಿ ಅದರ ಬದಲು ಉಮ್ಮೀದ ಎಂದು ಹೆಸರು ಬದಲಾಯಿಸಿದ್ದಾರೆ. ಇದರಿಂದ ದೇಶದ ರೈತಾಪಿ ವರ್ಗ ಹಾಗೂ ಜನಕ್ಕೂ ಒಂದು ಸಿಹಿ ಸುದ್ದಿ ಕೇಂದ್ರ ಸರ್ಕಾರ ಕೊಟ್ಟಂತಾಗಿದೆ. ದೇಶದ ರೈತರ ಬದುಕನ್ನು ಬೀದಿಗೆ ತರಬಾರದು ಎಂಬ ಉದ್ದೇಶದಿಂದ ಕೇಂದ್ರ ಸರ್ಕಾರ ಕಾನೂನು ತಿದ್ದುಪಡಿ ಮಾಡುವ ಮೂಲಕ ಇಡೀ ಜಗತ್ತಿನಲ್ಲಿಯೇ ಒಂದು ಮಾದರಿ ನಿರ್ಣಯವನ್ನು ಕೇಂದ್ರ ಸರ್ಕಾರ ತೆಗೆದುಕೊಂಡಿದ್ದು ತುಂಬಾ ಸಂತಸದ ವಿಷಯ ಮತ್ತು ಸ್ವಾಗತಾರ್ಹವಾಗಿದೆ ಎಂದು ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಸಂತಸ ವ್ಯಕ್ತಪಡಿಸಿ ಕೇಂದ್ರ ಸರ್ಕಾರಕ್ಕೆ ಅಭಿನಂದನೆ ಸಲ್ಲಿಸಿದ್ದಾರೆ.

ಸಂಭ್ರಮಾಚಾರಣೆಯಲ್ಲಿ ಜಿಲ್ಲಾ ಸಂಚಾಲಕ ಪಾಂಡು ಹ್ಯಾಟಿ, ತಾಳಿಕೋಟಿ ತಾಲೂಕಾಧ್ಯಕ್ಷ ಬಾಲಪ್ಪಗೌಡ ಲಿಂಗದಳ್ಳಿ, ರಾಮನಗೌಡ ಹಾದಿಮನಿ, ನಿಂಗನಗೌಡ ಚೌಧರಿ, ಶ್ರೀನಿವಾಸ ಭತಗುಣಕಿ, ಹನಮಂತರಾಯ ಗುಣಕಿ, ಬಸವನ ಬಾಗೇವಾಡಿ ತಾಲೂಕ ಉಪಾಧ್ಯಕ್ಷ ಹೊನಕೇರೆಪ್ಪ ತೆಲಗಿ, ಶೆಟ್ಟೆಪ್ಪ ಲಮಾಣಿ, ರಾಜೇಂದ್ರ ದೇಸಾಯಿ, ದತ್ತಾತ್ರೇಯ ಕುಲಕರ್ಣಿ, ಮಲ್ಲಪ್ಪ ಸಾಸನೂರ, ಬಂದಗಿಸಾಬ ಹಳ್ಳೂರ, ರೇವಣಪ್ಪಗೌಡ ಪಲೇಸಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಆಯುಧ ಪರವಾನಿಗೆ ದುರುಪಯೋಗ: ಲೈಸನ್ಸ್ ಅಮಾನತುಗೊಳಿಸಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅದೇಶ

**ವಿಜಯಪುರ :** ವಿಜಯಪುರ ಪೊಲೀಸ್ ಅಧೀಕ್ಷಕರ ವರದಿಯನ್ವಯ ತಿಕೋಟಾ ತಾಲೂಕಿನ ಲೋಗಾಂವದ ರಾಜುಗೌಡ ಸಿದ್ದಲಿಂಗಪ್ಪ ಬಿರಾದಾರ ಹಾಗೂ ಪಿಂಟು ಹೀರು ಲಮಾಣಿ ಇವರಿಗೆ ಆತ್ಮರಕ್ಷಣೆ ಸಲುವಾಗಿ ನೀಡಿರುವ ಆಯುಧ ಪರವಾನಿಗೆಯನ್ನು ದುರುಪಯೋಗ ಪಡಿಸಿಕೊಂಡಿರುವ ಕಾರಣದಿಂದಾಗಿ ಭಾರತೀಯ ಆಯುಧ ಕಾಯ್ದೆ ಅನ್ವಯ ಅವರು ಹೊಂದಿರುವ ಆಯುಧ ಪರವಾನಿಗೆಯನ್ನು ಅಮಾನತ್ತುಗೊಳಿಸಿ ವಿಚಾರಣೆಗೆ ಕಾಯ್ದಿರಿಸಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಆದೇಶಿಸಿದ್ದಾರೆ.

ಈ ಪರವಾನಿಗೆದಾರು ತಾವು ಹೊಂದಿರುವ ಆಯುಧವನ್ನು ಕೂಡಲೇ ವಿಜಯಪುರ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಜಮೆ ಮಾಡುವಂತೆಯೂ ಆದೇಶದಲ್ಲಿ ಅವರು ತಿಳಿಸಿದ್ದಾರೆ.

# ಬೆಳೆ ಪರಿಹಾರ ತಾರತಮ್ಯ ಹೋಗಲಾಡಿಸಲು ಭಾರತೀಯ ಕಿಸಾನ ಸಂಘ ವತಿಯಿಂದ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಕೆ

**ವಿಜಯಪುರ :** ಜಿಲ್ಲೆಯ ಬಸವನ ಬಾಗೇವಾಡಿ ತಾಲೂಕಿನ ಡೋಣೂರು ಪಂಚಾಯತಿ ವ್ಯಾಪ್ತಿಯಲ್ಲಿನ ಬೊಮ್ಮನಹಳ್ಳಿ ಗ್ರಾಮಕ್ಕೆ ವಿಮೆ ಪರಿಹಾರ ಸರಿಯಾಗಿ ಸಮೀಕ್ಷೆ ಮಾಡದೆ ಇರುವ ಕುರಿತು ಮತ್ತು ಡೋಣಿ ಪ್ರವಾಹದ ಹಾನಿಯಾದ ಬಿಸನಾಳ, ಮುಳ್ಳಾಳ ಮತ್ತು ಬೊಮ್ಮನಹಳ್ಳಿ ಗ್ರಾಮದ ರೈತರಿಗೆ ಪರಿಹಾರ ನೀಡುವ ಕುರಿತು ಜಿಲ್ಲಾಧಿಕಾರಿ ಟಿ. ಭೂಬಾಲನ್ ಅವರಿಗೆ ಭಾರತೀಯ ಕಿಸಾನ ಸಂಘ ಕರ್ನಾಟಕ ಪ್ರದೇಶ ವತಿಯಿಂದ ಗುರುವಾರ ಮನವಿ ಸಲ್ಲಿಸಲಾಯಿತು.

ಭಾರತೀಯ ಕಿಸಾನ ಸಂಘ ಕರ್ನಾಟಕ ಪ್ರದೇಶ ಉತ್ತರ ಪ್ರಾಂತ ಉಪಾಧ್ಯಕ್ಷ ಮಲ್ಲನಗೌಡ ಪಾಟೀಲ ಮಾತನಾಡಿ, ಬಸವನ ಬಾಗೇವಾಡಿ ತಾಲೂಕಿನ ಡೋಣೂರ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಅತಿ ಕಡಿಮೆ ಪರಿಹಾರ ವಿಮೆ ನೀಡಿದ್ದಾರೆ. ಅದರಲ್ಲಿ ಬೊಮ್ಮನಹಳ್ಳಿ ಗ್ರಾಮಕ್ಕೆ ಪ್ರತಿ ಎಕರೆಗೆ




1300–1700 ವರೆಗೆ ಪರಿಹಾರ ನೀಡಿದ್ದಾರೆ. ಕೆಲವು ಕಡೆ ಹೆಚ್ಚಿಗೆ ನೀಡಿದ್ದಾರೆ. ಸರಿಯಾಗಿ ಬೆಳೆ ವೀಕ್ಷಣೆ ಮಾಡದೆ ಪರಿಹಾರ ವಿಮೆ ನೀಡಿದ್ದಾರೆ. ಬೊಮ್ಮನಹಳ್ಳಿಯ ಚೇತನ ಬಸಪ್ಪ ಗುನ್ನಾಪುರ ಇವರ ರಿ.ಸ.ನಂ. 165 ಸರ್ವೆ ಮಾಡಿದ್ದು ಕೂಡಾ ಇದೆ. ಆದರೆ ಪರಿಹಾರ ಪ್ರತಿ ಎಕರೆಗೆ 1648 ರೂ. ವಿಮೆ ಪರಿಹಾರ ನೀಡಿದೆ. ಕಾರಣ ಈ ತಾರತಮ್ಯ ಹೊಡೆದೋಡಿಸಿ ಸರಿಯಾದ ಹೆಚ್ಚಿನ ಪರಿಹಾರ ವಿಮೆ ನೀಡಲು ಕೋರಲಾಗಿದೆ. ಒಟ್ಟಾರೆ ಜಿಲ್ಲೆಯಾದ್ಯಂತ ವಿಮೆ ಪರಿಹಾರ ಸರಿಯಾಗಿ ಸರ್ವೆ ಮಾಡದೇ ನೀಡಿದ್ದಾರೆ. ಎಂದು ರೈತರೂ. ದೂರುತ್ತಿರುವರು. ಕಾರಣ ಇನ್ನೊಮ್ಮೆ ಪರಿಶೀಲಗೆ ವಿಮೆ ಕಂಪನಿಗೆ ಪರಿಹಾರ ಕೊಡಲು ತಿಳಿಸಿ ಜಿಲ್ಲಾಧಿಕಾರಿಗಳು ಮುತುವರ್ಜಿ ವಹಿಸಿ ಈ ರೈತರ ಮನವಿಗೆ ಕ್ರಮಕೈಕೊಳ್ಳಲು ಕೋರಿದರು.

ಈ ಸಂದರ್ಭಧಲ್ಲಿ ಸಚಿನ ಪಾಟೀಲ, ಭಾರತೀಯ ಕಿಸಾನ ಸಂಘ ಕರ್ನಾಟಕ ಪ್ರದೇಶಯಮನಪ್ಪಹಾದಿಮನಿ, ಆರ್.ಎಚ್. ಅಕ್ಕಾಗೋಳ, ಬಸವರಾಜ ಡೊಮನಾಳ, ಕೆ.ಟಿ. ಅಗಸರ, ಲಗಮಣ ತಳವಾರ, ಆರ್. ಎಂ.ವಾಲಿಕಾರ, ಪಿ.ಬಿ.ಗುನ್ನಾಪೂರ, ಶಂಕ್ರಪ್ಪ ಹಿಪ್ಪರಗಿ, ನಿಂಗು ತುಂಬಗಿ, ಭೀಮರಾವ ತಳವಾರ, ನಾನಾಗೌಡ ಮದರಗಿ, ಅಣ್ಣಪ್ಪ ಮಧಭಾವಿ, ಬಿ.ಬಿ. ಹಾದಿಮನಿ ಮತ್ತಿತರರು ಉಪಸ್ಥಿತರಿದ್ದರು.

# ಜೆಎಸ್‌ಎಸ್ ಆಸ್ಪತ್ರೆ ಸಿಬ್ಬಂದಿಗೆ ಆರೋಗ್ಯ ಸೇವೆ ಒದಗಿಸಲು ಎಜಿಪಿ ಸಿ.ಎನ್.ಜಿ ಗ್ಯಾಸ್ ಕಂಪನಿ ಒಡಂಬಡಿಕೆ

**ವಿಜಯಪುರ :** ಎಜಿಪಿ ಸಿ.ಎನ್.ಜಿ ಗ್ಯಾಸ್ ಕಂಪನಿಯೂ ತನ್ನ ಸಿಬ್ಬಂದಿಗಳಿಗೆ ಆರೋಗ್ಯ ಸೇವೆ ಒದಗಿಸಲು ನಗರದ ಶ್ರೀ ಸಿದ್ದೇಶ್ವರ ಸೂಪರ್ ಸ್ಪೇಶಾಲಿಟಿ ಆಸ್ಪತ್ರೆ (ಜೆ.ಎಸ್.ಎಸ್ ಆಸ್ಪತ್ರೆ) ಯೊಂದಿಗೆ ಈಚೆಗೆ ಒಪ್ಪಂದ ಮಾಡಿಕೊಂಡಿದ್ದು, ಎಜಿಪಿ ಸಿ.ಎನ್.ಜಿ ಗ್ಯಾಸ್ ಕಂಪನಿ ಪ್ರಾದೇಶಿಕ ಮುಖ್ಯಸ್ಥ ರಂಗರಾಜನ್ ಶೇ?ಾದ್ರಿ ಮತ್ತು ಜೆ.ಎಸ್.ಎಸ್ ಆಸ್ಪತ್ರೆ ಸಿಇಓ ಡಾ.ಶರಣ್ ಮಳಖೇಡ ಅವರು ತಿಳಿವಳಿಕೆ ಪತ್ರಕ್ಕೆ ಸಹಿ ಹಾಕಿದರು.

ಎಜಿಪಿ ಸಿ.ಎನ್.ಜಿ ಗ್ಯಾಸ್ ಕಂಪನಿ ಪ್ರಾದೇಶಿಕ ಮುಖ್ಯಸ್ಥ ರಂಗರಾಜನ್ ಶೇ?ಾದ್ರಿ ಮಾತನಾಡಿ, ಶ್ರೀ ಸಿದ್ದೇಶ್ವರ ಲೋಕ ಕಲ್ಯಾಣ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಹಾಗೂ ಶಾಸಕ ಬಸನಗೌಡ ಪಾಟೀಲ ಯತ್ನಾಳ ರವರ ಮಾರ್ಗದರ್ಶನದಲ್ಲಿ ನಡೆಯುತ್ತಿರುವ ಈ ಜೆ.ಎಸ್.ಎಸ್ ಆಸ್ಪತ್ರೆಯಲ್ಲಿ ಅತ್ಯುತ್ತಮ ಗುಣಮಟ್ಟದ ಚಿಕಿತ್ಸೆ ನೀಡಲಾಗುತ್ತದೆ. ಅತ್ಯಾಧುನಿಕ ತಂತ್ರಜ್ಞಾನ ಆಧಾರಿತ ಚಿಕಿತ್ಸೆ ನೀಡುತ್ತಿರುವುದರಿಂದ ನಮ್ಮ ಸಿಬ್ಬಂದಿಗೆ ಉತ್ತಮ ವೈದ್ಯಕೀಯ ಸೇವೆ ಕಲ್ಪಿಸಲು ಒಪ್ಪಂದ ಮಾಡಿಕೊಂಡಿದ್ದೇವೆ. ಕಾರ್ಮಿಕ ಶಕ್ತಿ ಮತ್ತು ಸಮುದಾಯದ ಯೋಗಕ್ಷೇಮವನ್ನು ಖಚಿತಪಡಿಸಿಕೊಳ್ಳಲು ನಮ್ಮ ಸಾಮೂಹಿಕ ಬದ್ಧತೆಗೆ ಸಾಕ್ಷಿಯಾಗಿದೆ ಎಂದರು.

ಆಸ್ಪತ್ರೆ ಸಿಇಓ ಡಾ. ಶರಣ ಮಳಖೇಡ, ಎಜಿಪಿ ಸಿ.ಎನ್.ಜಿ ಗ್ಯಾಸ್ ಕಂಪನಿ ಜೊತೆಗೆ ಒಪ್ಪಂದ ಮಾಡಿಕೊಳ್ಳುವುದಕ್ಕೆ ಖುಷಿ ಆಗುತ್ತಿದೆ. ಕಂಪನಿಯು ನಮ್ಮ ಮೇಲೆ ಇಟ್ಟಿರುವ ಭರವಸೆಯಂತೆ, ನೌಕರರಿಗೆ ಅತ್ಯುತ್ತಮ ಗುಣಮಟ್ಟದ ವೈದ್ಯಕೀಯ ಸೇವೆ ಕಲ್ಪಿಸುವುದಾಗಿ ಭರವಸೆ ನೀಡಿದರು.

# ದೇವರ ದಾಸಿಮಯ್ಯನವರ ವಚನಗಳು ಆತ್ಮಶುದ್ಧಿಗೊಳಿಸುತ್ತವೆ: ಪ್ರೊ. ನಾಗರಾಜ

**ವಿಜಯಪುರ :** ದೇವರ ದಾಸಿಮಯ್ಯನ ವಚನಗಳು ವ್ಯಕ್ತಿಯ ಆತ್ಮಶುದ್ಧಿಗೊಳಿಸುತ್ತವೆ ಎಂದು ಮಹಿಳಾ ವಿವಿಯ ಕನ್ನಡ ವಿಭಾಗದ ಮುಖ್ಯಸ್ಥ ಪ್ರೊ. ಎಂ ನಾಗರಾಜ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಸ್ನಾತಕ ವಿಭಾಗದಲ್ಲಿ (ಎನ್‌ಇಪಿ) ಬುಧವಾರ ಆಯೋಜಿಸಿದ್ದ ದೇವರ ದಾಸಿಮಯ್ಯ ಅವರ ಜನ್ಮ ದಿನಾಚರಣೆಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದೇವರ ದಾಸಿಮಯ್ಯ ಅವರ ವಚನಗಳು ಸಮಾಜದಲ್ಲಿ ಮಹತ್ವದ ಪರಿವರ್ತನೆಗಳನ್ನು ಉಂಟು ಮಾಡುವ ಶಕ್ತಿ ಹೊಂದಿವೆ. ಅವರ ವಚನಗಳಲ್ಲಿ ಶ್ರಮಪೂಜೆ, ಭಕ್ತಿ, ಮಾನವೀಯತೆ ಮತ್ತು ಸಮಾನತೆಯ ಆದರ್ಶಗಳು ಸ್ಪಷ್ಟವಾಗಿ ಪ್ರತಿಫಲಿಸುತ್ತವೆ. ಅವರ ವಚನಗಳು ಕೇವಲ ಭಕ್ತಿಯ




ಸಾರವಲ್ಲ, ಅದು ಬದುಕಿನ ನೈತಿಕ ಮೌಲ್ಯಗಳಿಗೂ ದಾರಿದೀಪವಾಗಿದೆ. ಹೊಸ ತಲೆಮಾರಿಗೆ ದಾಸಿಮಯ್ಯನ ವಚನಗಳು ಸೌಹಾರ್ದತೆ, ಸತ್ಕಾರ್ಯ ಮತ್ತು ಮಾನವೀಯತೆಯ ಆಧಾರಶಿಲೆಯಾಗಿ ಕಾರ್ಯ ನಿರ್ವಹಿಸುತ್ತವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ವಿವಿಯ ಯುಜಿ ಸ್ನಾತಕ ವಿಭಾಗದ ವಿಶೇಷಾಧಿಕಾರಿ ಪ್ರೊ. ಸಕ್ಪಾಲ ಹೂವಣ್ಣ ಮಾತನಾಡಿ, ದೇವರ ದಾಸಿಮಯ್ಯ ಅವರ ವಚನಗಳು ಇಂದಿಗೂ ಸಮಾಜದ ಸುಧಾರಣೆಗೆ ಪ್ರೇರಣೆಯಾಗಿದ್ದು, ಅವು ಬದುಕಿಗೆ ಮಾರ್ಗದರ್ಶಕ ಬೆಳಕಾಗಿ ಕೆಲಸ ಮಾಡುತ್ತವೆ. ವಿದ್ಯಾರ್ಥಿನಿಯರು ಶರಣರ ವಚನಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಸಲಹೆ ನೀಡಲಾಯಿತು. ಮಹಾನ್ ವ್ಯಕ್ತಿಗಳ ಜಯಂತಿಗಳನ್ನು ಆಚರಿಸುವ ಮೂಲಕ ಅವರ ಆದರ್ಶಗಳನ್ನು ಜ್ಞಾಪಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ವಿಭಾಗದ ಸಂಯೋಜಕ ಡಾ. ಜಿ. ಸೌಭಾಗ್ಯ, ಡಾ. ಚಲುವರಾಜು ಮತ್ತು ಸಾಂಸ್ಕೃತಿಕ ಸಂಯೋಜಕ ಡಾ. ಮೆಹರಾಜ್ ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಪ್ರತಿಮಾ ಬಸವರಾಜ ಜುಂಜಾ ಸ್ವಾಗತಿಸಿದರು. ಸುಕನ್ಯ ಕಲ್ಲೂರ್ಕರ್ ನಿರೂಪಿಸಿದರು. ಕೀರ್ತನಾ ಬಸವರಾಜ ಹೊನವಾಡ ವಂದಿಸಿದರು.

# ಬಿಎಲ್‌ಡಿಇ ಡಿ. ಫಾರ್ಮ ವಿದ್ಯಾರ್ಥಿಗಳು ಆಯುರ್ವೇದ ಕಾಲೇಜ್ ವನಕ್ಕೆ ಭೇಟಿ




**ವಿಜಯಪುರ :** ನಗರದ ಬಿ.ಎಲ್.ಡಿ.ಈ ಸಂಸ್ಥೆಯ ಶ್ರೀ ಸಂಗನಬಸವ ಮಹಾಸ್ವಾಮೀಜಿ ಔಷಧೀಯ ವಿಜ್ಞಾನ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರದ ಡಿ. ಫಾರ್ಮ್ ವಿದ್ಯಾರ್ಥಿಗಳು ಎವಿಎಸ್ ಆಯುರ್ವೇದ ಮಹಾವಿದ್ಯಾಲಯದ ಶ್ರೀವನಕ್ಕೆ ಭೇಟಿ ನೀಡಿ ಕ್ಷೇತ್ರ ಅಧ್ಯಯನ ನಡೆಸಿದರು.

ಶುಕ್ರವಾರ ಎವಿಎಸ್ ಆಯುರ್ವೇದ ಕಾಲೇಜಿಗೆ ತೆರಳಿದ ವಿದ್ಯಾರ್ಥಿಗಳು, ಭಾರತೀಯ ಔಷಧ ಪರಿಷತ್ತಿನ ಡಿಪ್ಲೋಮಾ ಕೋರ್ಸಿನ ಶೈಕ್ಷಣಿಕ ಚಟುವಟಿಕೆ ಭಾಗವಾಗಿ ಈ ಭೇಟಿ ನೀಡಿದರು.


ಈ ಮೂಲಕ ನೈಸರ್ಗಿಕ ಜಗತ್ತಿನ ಅನುಭವ ಪಡೆದುಕೊಂಡರು.

ನಾನಾ ಔಷಧೀಯ ಸಸ್ಯಗಳನ್ನು ವೀಕ್ಷಿಸಿದ ತರಗತಿಯ ಕೊಠಡಿಗಳಲ್ಲಿ ತಾವು ಪುಸ್ತಕಗಳಲ್ಲಿ ಓದಿದ ವಿಷಯ ಮತ್ತು ಇಲ್ಲಿ ನಿಸರ್ಗದಲ್ಲಿರುವ 'ಔಷಧಿಯ ಸಸ್ಯಗಳ ಕುರಿತು ಮನನ ಮಾಡಿಕೊಂಡರು.

ಎವಿಎಸ್ ಆಯುರ್ವೇದ ಕಾಲೇಜಿನ ಶ್ರೀವನದ ಅಧಿಕಾರಿ ಡಾ. ಗುರುದೇವಿ ಪಾಟೀಲ ಅವರು ವಿದ್ಯಾರ್ಥಿಗಳಿಗೆ ನಾನಾ ಬಗೆಯ ಔಷಧೀಯ ಸಸ್ಯಗಳ ಬಗ್ಗೆ ಸಮಗ್ರ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಔಷಧೀಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಸಿ. ಮಲ್ಲಿಕಾರ್ಜುನ ಶೆಟ್ಟಿ, ನೈಸರ್ಗಿಕ ಔಷಧ ವಿಜ್ಞಾನ ವಿಭಾಗದ ಡಾ. ಬಸವರಾಜ ಹುನಸಗಿ, ಸಹಾಯಕ ಪ್ರಾಧ್ಯಾಪಕ ಅಜಯ ಶಹಾಪುರ, ಸಂದೀಪ ಉಮರಾಣಿ, ಶಿವರಾಜ ಕಾಪಸೆ ಮುಂತಾದವರು ಉಪಸ್ಥಿತರಿದ್ದರು.

# ಶಿಕ್ಷಕರಿಂದ ಮಕ್ಕಳಿಗೆ ನಿರಂತರ ಮಾರ್ಗದರ್ಶನ ಅಗತ್ಯ: ಟಿ.ಎಸ್. ಆಲಗೂರ



**ಇಂಡಿ :** ಗ್ರಾಮೀಣ ಭಾಗದಲ್ಲಿ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸುವಲ್ಲಿ ಎಸ್ ಡಿ ಶರ್ಮಾ ಅವರ ಪಾತ್ರ ಅಪಾರವಾಗಿದ್ದು, ಪ್ರಾಮಾಣಿಕವಾಗಿ ಶಾಲೆಗಳ ಅಭಿವೃದ್ಧಿ ಮಾಡುತ್ತಾ, ಜನಾನುರಾಗಿ ಮುಖ್ಯ ಶಿಕ್ಷಕರಾಗಿದ್ದಾರೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಟಿ ಎಸ್ ಆಲಗೂರ ಹೇಳಿದರು.

ಗುರುವಾರದಂದು ತಾಲೂಕಿನ ಬಂಥನಾಳ ಗ್ರಾಮದ

ಕೆಬಿಎಚ್‌ಪಿಎಸ್ ಶಾಲೆಯಲ್ಲಿ ಹಮ್ಮಿಕೊಂಡ 'ನಿವೃತ್ತ ಮುಖ್ಯ ಶಿಕ್ಷಕ ಎಸ್ ಡಿ ಶರ್ಮಾ ಅವರ ಅಭಿನಂದನಾ ಸಮಾರಂಭ' ವನ್ನು ಉದ್ಧೇಶಿಸಿ ಮಾತನಾಡಿದರು.

ಈ ಶಾಲೆಯಲ್ಲಿ 10 ವರ್ಷಗಳ ಕಾಲ ಮುಖ್ಯ ಶಿಕ್ಷಕರಾಗಿ ಮಾಡಿದ ಅವರ ಸಾಧನೆ ಎಲ್ಲರಿಗೂ ಮಾದರಿಯಾಗಿದೆ.

ಮಕ್ಕಳಿಗೆ ನಿರಂತರ ಮಾರ್ಗದರ್ಶನ ಮಾಡುತ್ತಾ, ತಮ್ಮ ನಿವೃತ್ತಿ ಜೀವನವನ್ನು ಸಾರ್ಥಕಮಾಡಿಕೊಳ್ಳಬೇಕು ಎಂದು ಹೇಳಿದರು.

ಕ್ಷೇತ್ರ ಸಮನ್ವಯಾಧಿಕಾರಿ ಎಸ್ ಆರ್ ನಡುಗಡ್ಡಿ ಮಾತನಾಡಿ, ಸುದೀರ್ಘ 40 ವರ್ಷಗಳ ಸೇವೆಯಲ್ಲಿ ಮಕ್ಕಳ ಉತ್ತಮ ಕಲಿಕೆಗಾಗಿ ಎಸ್ ಡಿ ಶರ್ಮಾ ಅವರು ಸದಾ ಪ್ರೇರಣೆ ನೀಡುತ್ತಿದ್ದರು. ಅವರ ಅನುಭವಿಕ ಮಾರ್ಗದರ್ಶನ ಎಲ್ಲರಿಗೂ ಸಿಗಲಿ ಎಂದು ಹೇಳಿದರು.

ತಾಲೂಕ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ವೈ ಟಿ ಪಾಟೀಲ, ತಾಂಬಾ ಗ್ರಾಮ ಪಂಚಾಯಿತಿ ಅಧ್ಯಕ್ಷ ರಜಾಕ ಚಿಕ್ಕಗಸಿ, ಉಪಾಧ್ಯಕ್ಷ ರವೀಂದ್ರ ನಡಗಡ್ಡಿ, ಗ್ರಾಮದ ಗಣ್ಯರಾದ ಶರಣಪ್ಪ ಜಾಲವಾದಿ, ಸಿದ್ದನಗೌಡ ಪಾಟೀಲ, ಅಶೋಕಗೌಡ ಪಾಟೀಲ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಉಪಾಧ್ಯಕ್ಷ ಎಂ ಎಂ ವಾಲೀಕಾರ, ಬೆಳಗಾವಿ ವಿಭಾಗ ಮಟ್ಟದ ಉಪಾಧ್ಯಕ್ಷ ಎಸ್ ವಿ ಹರಳಯ್ಯ, ಇಂಡಿ ತಾಲೂಕಿನ ಪ್ರಾಥಮಿಕ ಶಾಲಾ ಶಿಕ್ಷಕರ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಪ್ರಭುಲಿಂಗ ಚಾಂದಕವಟೆ, ಎನ್‌ಜಿಓ ಸದಸ್ಯ ಎಸ್ ಡಿ ಪಾಟೀಲ, ಶಿಕ್ಷಕ ಎಸ್ ಆರ್ ಪಾಟೀಲ, ಎಸ್ ಸಿ,ಎಸ್ ಟಿ ನೌಕರರ ಸಂಘದ ಅಧ್ಯಕ್ಷ ಭೀಮರಾಯ ವಠಾರ,ಶಿಕ್ಷಣ ಸಂಯೋಜಕ ಪ್ರಕಾಶ ನಾಯಕ, ಬಿ ಆರ್ ಪಿ ಗಳಾದ ಅಶೋಕ ರಾಠೋಡ, ಎ ಜಿ ಚೌಧರಿ, ಬಸವರಾಜ ಗೊರನಾಳ, ಕಚೇರಿ ಅಧೀಕ್ಷಕ ಎಸ್ ಸಿ ಗೌಡರ, ತಾಂಬಾ ಕ್ಲಸ್ಟರ್ ಸಿ ಆರ್ ಪಿ ಶರಣು ಕ್ಯಾತಾ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ನಿವೃತ್ತ ಮುಖ್ಯ ಶಿಕ್ಷಕ ಎಸ್ ಡಿ ಶರ್ಮಾ ಹಾಗೂ ಅವರ ಪತ್ನಿ ಶಶಿಕಲಾ ಶರ್ಮಾ ಅವರನ್ನು ಶಾಲಾ ಎಸ್ ಡಿ ಎಂ ಸಿ, ಗ್ರಾಮಸ್ಥರು,ನಡುಗಡ್ಡಿ ಕುಟುಂಬ ಹಾಗೂ ವಿವಿಧ ಸಂಘಟನೆಗಳ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಶಿಕ್ಷಕ ಈರಣ್ಣ ಕಂಬಾರ ಸ್ವಾಗತಿಸಿದರು.ಬಿ ಎಸ್ ಗಂಡೋಳಿ ನಿರೂಪಿಸಿದರು.ಆರ್ ಎಸ್ ಸಫಲಿ ವಂದಿಸಿದರು.

# ಕುಡಿಯುವ ನೀರಿಗೆ ತೊಂದರೆಯಾಗದಂತೆ ಕ್ರಮವಹಿಸಿ: ಎಸಿ ಅನುರಾಧಾ



**ಇಂಡಿ :** ಬೇಸಿಗೆಯಲ್ಲಿ ಕುಡಿಯುವ ನೀರು ಸಮರ್ಪಕವಾಗಿ ಒದಗಿಸಲು ಯಾವುದೇ ಅಡೆ ತಡೆ ಉಂಟಾಗದಂತೆ ನೋಡಿಕೊಳ್ಳಬೇಕು. ಅದರಂತೆ ಜನ ಜಾನುವಾರುಗಳಿಗೆ ಯಾವದೇ ರೀತಿಯ ನೀರಿನ ಅಭಾವವಾಗದಂತೆಕುಡಿಯುವನೀರುಪೂರೈಸಬೇಕು ಎಂದು ಕಂದಾಯ ಉಪವಿಬಾಗಾಧಿಕಾರಿ ಅನುರಾಧಾ ವಸ್ತ್ರದ ಹೇಳಿದರು.

ತಾ.ಪಂ ಕಾರ್ಯಾಲಯದಲ್ಲಿ ನಡೆದ ತಾಲೂಕಿನ ಎಲ್ಲಾ ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಮತ್ತು ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡುತ್ತಿದ್ದರು.

ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿ ನಂದೀಪ ರಾಠೋಡ ಮಾತನಾಡಿ ಕುಡಿಯುವ ನೀರಿನ ಅನುದಾನ ಮಾಹಿತಿ ಪಡೆದು ಹಾಗೂ ಗ್ರಾಮ ಹಾಗೂ ವಸತಿಗಳಿಗೆ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಸೂಕ್ತ ಕ್ರಮ ಕೈಕೊಳ್ಳಲು ಸೂಚನೆ ನೀಡಿದರು.

ತಾಲೂಕಿನ ಬಸನಾಳ ಪಿಡಿಓ ಮಲ್ಲಿಕಾರ್ಜುನ ನಿಲಂಗಿ ಮಾತನಾಡಿ ಬಸನಾಳ, ಅಗಸನಾಳ, ಕ್ಯಾತನಕೇರಿ, ಹಾಗೂ ತಾಂಡಾಗಳ ಕುಡಿಯುವ ನೀರಿನ ಸಮಸ್ಯೆ ಕುರಿತು ಮಾತನಾಡಿದರು. ಎಸಿ ವಸ್ತ್ರದ ಅವರು ಮಾತನಾಡಿ ಗ್ರಾಮಗಳಿಗೆ ಖುದ್ದು ಭೇಟಿ ನೀಡಿ ನೀರಿನ ತೊಂದರೆ ಆಗದಂತೆ ಕ್ರಮವಹಿಸಲಾಗುವದು ಎಂದರು. ಸಭೆಯಲ್ಲಿ ಸಹಾಯಕ ನಿರ್ದೇಶಕ ಪ್ರಕಾಶ ರಾಠೋಡ, ಪಿಡಿಓ ಬಸವರಾಜ ಬಬಲಾದ, ಸಿದರಾಯ ಬಿರಾದಾರ, ಜಬ್ಬಾರಲಿ ಹಳ್ಳಿ, ಮಹೇಶ ನಾಯಕ, ಮಹೇಶ ರಾಠೋಡ, ಶಿವು ಪೂಜಾರಿ, ಶೋಭಾ ಹೊರಪೇಟೆ, ಆಶಾ ನಾಯಕ ಮತ್ತಿತರಿದ್ದರು.

# ಪಿಂಚಣಿ ಪರಿಷ್ಕರಿಸಲು ಆಗ್ರಹಿಸಿ ಬಿಎಸ್‌ಎನ್‌ಎಲ್ ಪಿಂಚಣಿದಾರರ ಪ್ರತಿಭಟನೆ




**ವಿಜಯಪುರ:** ಪಿಂಚಣಿ ಪರಿಷ್ಕರಿಸದಿರಲು ನಿರ್ಧರಿಸಿರುವ ಕೇಂದ್ರ ಸರ್ಕಾರದ ನಿಲುವು ವಿರೋಧಿಸಿ ದೇಶದ ಎಲ್ಲೆಡೆಯಂತೆ ನಗರದ ಬಿಎಸ್‌ಎನ್‌ಎಲ್ ಕಚೇರಿ ಆವರಣದಲ್ಲಿಯೂ ಬಿಎಸ್‌ಎನ್‌ಎಲ್ ಪಿಂಚಣಿದಾರರು ಗುರುವಾರ ಧರಣಿ ಸತ್ಯಾಗ್ರಹ ನಡೆಸಿದರು.

ಪಿಂಚಣಿ ಪಡೆಯುವದು ಪಿಂಚಣಿದಾರರ ಹಕ್ಕು. ಬಿಎಸ್‌ಎನ್‌ಎಲ್ ಪಿಂಚಣಿದಾರರ ಪಿಂಚಣಿ 7ನೇ ವೇತನ ಆಯೋಗ ಆದೇಶದ ಅನುಗುಣವಾಗಿ ಪರಿಷ್ಕರಣೆ ಆಗಿರುವುದಿಲ್ಲ. ಈಗ ಕೇಂದ್ರ ಸರ್ಕಾರ ಬಿಎಸ್‌ಎನ್‌ಎಲ್ ಪಿಂಚಣಿದಾರರ ಪಿಂಚಣಿ ಪರಿಷ್ಕರಿಸದಿರಲು ನಿರ್ಧರಿಸಿರುವುದು 8ನೇ ವೇತನ ಆಯೋಗದ ಅಧಿಕಾರ ವ್ಯಾಪ್ತಿಯನ್ನು ಮೊಟಕುಗೊಳಿಸಿದಂತಾಗಿದೆ. ಇದು ಕೇಂದ್ರ ಸರ್ಕಾರದ ಏಕ ಪಕ್ಷೀಯ ನಿರ್ಧಾರವಾಗಿದೆ ಎಂದು ಪಿಂಚಣಿದಾರರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಬಿಎಸ್‌ಎನ್‌ಎಲ್ ಪಿಂಚಣಿದಾರರು ದೆಹಲಿಕ್ಯಾಟ್‌ಕೇಸದಾಖಲಿಸಿದ್ದು,ಅದರಲ್ಲಿ ಬಿಎಸ್‌ಎನ್‌ಎಲ್ ಪಿಂಚಣಿ ದಾರರು ಜಯಗಳಿಸಿದ್ದು. ಈ ಸಮಸ್ಯೆಯಿಂದ ಹೊರಬರಲು ಕೇಂದ್ರ ಸರ್ಕಾರವು 23-3-2025 ರಂದು ಹಣಕಾಸು ಬಿಲ್ಲನ್ನು ಪಾರ್ಲಿಮೆಂಟಿನಲ್ಲಿ ಏಕಪಕ್ಷೀಯವಾಗಿ ಪಾಸು ಮಾಡಲಾಗಿದೆ. ಇದು ಬಿಎಸ್‌ಎನ್‌ಎಲ್ ಪಿಂಚಣಿದಾರರಿಗೆ ಘೋರ ಅನ್ಯಾಯ ಮಾಡಿದಂತಾಗಿದೆ. ಅಲ್ಲದೆ ಕೇಂದ್ರ ಸರ್ಕಾರದ ಈ ನಿರ್ಧಾರ ಉಚ್ಚ ನ್ಯಾಯಾಲಯದ ಆದೇಶವನ್ನು ಉಲ್ಲಂಘಿಸಿದಂತಾಗುವುದು ಎಂದು ಪಿಂಚಣಿದಾರರು ಹೇಳಿದ್ದಾರೆ.

ಪ್ರತಿ ವೇತನ ಪರಿಷ್ಕರಣೆ ಸಂದರ್ಭದಲ್ಲಿ ಬಿಎಸ್‌ಎನ್‌ಎಲ್ ಪಿಂಚಣಿದಾರರ ವೇತನ ಪರಿಷ್ಕರಣೆ ಮಾಡಬೇಕು ಎಂದು ಪಿಂಚಣಿದಾರರು ಒತ್ತಾಯಿಸಿದರು.

ಪಿಂಚಣಿದಾರರ ಸಂಘದ ಮುಖಂಡರಾದ ಎಸ್.ಎಲ್. ಕುಲಕರ್ಣಿ, ಡಿ.ಎಸ್. ಆಲಂದ, ಬಾಗಲಕೋಟೆಯ ಎಸ್.ಕೆ. ಸಜ್ಜನ ಸೇರಿದಂತೆ ಅನೇಕ ಪಿಂಚಣಿದಾರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಅಧ್ಯಕ್ಷರಾಗಿ ಪ್ರದೀಪಗೌಡ ಚ. ಪಾಟೀಲ ನೇಮಕ



**ಕೊಲ್ಹಾರ :** ತಾಲೂಕಿನ ನಾಗರದಿನ್ನಿ ಗ್ರಾಮದ ಪ್ರದೀಪಗೌಡ ಚ ಪಾಟೀಲ ಅವರನ್ನು ಕರ್ನಾಟಕ ಪ್ರದೇಶ್ ಕಾಂಗ್ರೆಸ್ ಸಮಿತಿಯ ನೀತಿ ಸಂಶೋಧನೆ ಹಾಗೂ ತರಬೇತಿ ವಿಭಾಗದ ಬಸವನಬಾಗೇವಾಡಿ ಮತಕ್ಷೇತ್ರದ ಅಧ್ಯಕ್ಷರಾಗಿ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಪ್ರದೀಪ್‌ಗೌಡ ಚ ಪಾಟೀಲ ಸುದ್ದಿಗಾರರೊಂದಿಗೆ ಮಾತನಾಡಿ ನನಗೆ ನೀಡಿರುವ ಜವಾಬ್ದಾರಿಯನ್ನು ವಹಿಸಿಕೊಂಡು ಕೆಪಿಸಿಸಿ ಮಾರ್ಗದರ್ಶನದಲ್ಲಿ ರಾಜ್ಯ ಮತ್ತು ಸ್ಥಳೀಯ ನಾಯಕರ ಸಹಕಾರದೊಂದಿಗೆ ನೀತಿ ಸಂಶೋಧನೆ ಹಾಗೂ ತರಬೇತಿ ವಿಭಾಗದ ಸಂಘಟನೆ ಬಲಪಡಿಸಲು ಮತ್ತು ಆ ಮೂಲಕ ಪಕ್ಷವನ್ನು ಹೆಚ್ಚು ಬಲಪಡಿಸಲು ಶ್ರಮವಹಿಸುತ್ತೇನೆ ಎಂದರು.

# ಆರೋಗ್ಯ ವೃತ್ತಿಪರರಿಗಾಗಿ ಸರ್ಕಾರದಿಂದ ಸಾಗರೋತ್ತರ ಉದ್ಯೋಗ ಮೇಳ: ಡಾ. ಶರಣ ಪ್ರಕಾಶ್ ಪಾಟೀಲ್



**ಬೆಂಗಳೂರು :** ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲು ಸರ್ಕಾರದ ವತಿಯಿಂದ ರಾಜ್ಯದ ವಿವಿಧೆಡೆ ಉದ್ಯೋಗ ಮೇಳಗಳನ್ನು ಆಯೋಜಿಸುವುದರ ಜತೆಗೆ ಆರೋಗ್ಯ ವೃತ್ತಿಪರರಿಗಾಗಿ ಸಾಗರೋತ್ತರ ಉದ್ಯೋಗ ಮೇಳ ಆಯೋಜಿಸಲು ನಿರ್ಧರಿಸಲಾಗಿದೆ ಎಂದು ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ಹೇಳಿದ್ದಾರೆ.

ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾ ಸಂಸ್ಥೆ (ಎಫ್.ಕೆ.ಸಿ.ಸಿ.ಐ.) ವತಿಯಿದ ಸಂಸ್ಥೆಯ ಸರ್.ಎಂ.ವಿ. ಆಡಿಟೋರಿಯಂನಲ್ಲಿ ಶನಿವಾರ ಆಯೋಜಿಸಿದ್ದ "ಎಫ್.ಕೆ.ಸಿ.ಸಿ.ಐ ಉದ್ಯೋಗ ಉತ್ಸವ್ 2025-26" ಉದ್ಘಾಟಿಸಿ ಮಾತನಾಡಿದ ಸಚಿವರು, "ಜರ್ಮನಿ, ಜಪಾನ್, ಇಟಲಿ ಮತ್ತಿತರ ರಾಷ್ಟ್ರಗಳಿಂದ ನರ್ಸ್, ಅರೆವೈದ್ಯಕೀಯ ಮುಂತಾದ ಆರೋಗ್ಯ ವೃತ್ತಿಪರರಿಗೆ ಸಾಕಷ್ಟು ಬೇಡಿಕೆ ಇದೆ. ಹೀಗಾಗಿ ಮುಂದಿನ ಮೂರು ತಿಂಗಳಲ್ಲಿಈಆರೋಗ್ಯವೃತ್ತಿಪರರಿಗಾಗಿಯೇ ಸಾಗರೋತ್ತರ ಉದ್ಯೋಗ ಮೇಳವನ್ನು ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಆಯೋಜಿಸಲಾಗುವುದು", ಎಂದರು.

"ರಾಜ್ಯದ ಆರೋಗ್ಯ ವೃತ್ತಿಪರರಿಗೆ ವಿದೇಶಗಳಲ್ಲಿ ಸಾಕಷ್ಟು ಬೇಡಿಕೆ ಇದ್ದರೂ ಭಾಷೆಎಂಬುದು ಅವರಿಗೆ ಅಡ್ಡಿಯಾಗುತ್ತಿದೆ. ಹೀಗಾಗಿ ರಾಜ್ಯದ ನರ್ಸಿಂಗ್ ಕಾಲೇಜುಗಳಲ್ಲಿ ಜರ್ಮನ್ ಮತ್ತು ಜಾಪಾನೀಸ್ ಭಾಷೆಯನ್ನು ಪರಿಚಯಿಸಲು ಕೂಡ ನಿರ್ಧರಿಸಲಾಗಿದೆ. ಆ ಮೂಲಕ ಭಾಷಾ ಸಮಸ್ಯೆಯನ್ನು ಬಗೆಹರಿಸಲಾಗುವುದು", ಎಂದು ತಿಳಿಸಿದರು.

"ಸರ್ಕಾರದ ವತಿಯಿಂದ ಇತ್ತೀಚೆಗೆ ಬೆಂಗಳೂರಿನಲ್ಲಿ ಆಯೋಜಿಸಿದ್ದ ಬೃಹತ್ ಉದ್ಯೋಗ ಮೇಳಕ್ಕೆ 80 ಸಾವಿರ ಮಂದಿ ನೋಂದಣಿ ಮಾಡಿಸಿದ್ದು,

ಆ ಪೈಕಿ 45 ಸಾವಿರ ಮಂದಿ ಮೇಳದಲ್ಲಿ ಪಾಲ್ಗೊಂಡಿದ್ದರು. 9,654 ಮಂದಿಗೆ ಸ್ಥಳದಲ್ಲೇ ಉದ್ಯೋಗ ಲಭಿಸಿದ್ದರೆ, 16,865 ಮಂದಿಯನ್ನು ಶಾರ್ಟ್ ಲಿಸ್ಟ್ ಮಾಡಲಾಗಿತ್ತು", ಎಂದು ಮಾಹಿತಿ ನೀಡಿದರು

"ಉದ್ಯೋಗ ಮೇಳ ನಡೆಸಿದ ಕೂಡಲೇ ಅದು ಪೂರ್ಣ ಪ್ರಮಾಣದಲ್ಲಿ ಫಲ ನಡುತ್ತದೆ ಎಂದು ಅರ್ಥವಲ್ಲ. ಆದರೆ, ಅದರಿಂದ ಅಭ್ಯರ್ಥಿಗಳಿಗೆ ಅವಕಾಶ ಸಿಗುವುದರ ಜತೆಗೆ ಅವರಲ್ಲಿ ವಿಶ್ವಾಸ ಮೂಡುತ್ತದೆ. ಆ ವೇಳೆ ಕೈಗಾರಿಕಾ ವಲಯದಿಂದ ಲಭ್ಯವಾಗುವ ಮಾಹಿತಿ ಆಧರಿಸಿ ಕೌಶಲ ಹೊಂದಿದ ಅಭ್ಯರ್ಥಿಗಳನ್ನು ಸೃಷ್ಟಿಸಲು ಸಾಧ್ಯವಾಗುತ್ತದೆ", ಎಂದರು.

ಪದವೀಧರರು ಮತ್ತು ಡಿಪ್ಲೊಮಾ ಪದವಿ ಹೊಂದಿದವರಿಗೆ ಉದ್ಯೋಗ ಲಭಿಸುವವರೆಗೆ ನಿರುದ್ಯೋಗ ಭತ್ಯೆ ನೀಡುವ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಯಾದ 'ಯುವ ನಿಧಿ' ಅಡಿ ಈವರೆಗೆ 2.80 ಲಕ್ಷ ಮಂದಿ ನೋಂದಣಿ ಮಾಡಿಕೊಂಡಿದ್ದು, 1.80 ಮಂದಿ ನಿರುದ್ಯೋಗ ಭತ್ಯೆ ಪಡೆಯುತ್ತಿದ್ದಾರೆ. ಈ ಉದ್ಯೋಗಾಂಕ್ಷಿಗಳನ್ನು ಉದ್ಯೋಗದಾತರೊಂದಿಗೆ ಸಂಪರ್ಕಿಸಲು ಸ್ಕಿಲ್ ಕನೆಕ್ಟ್ ಪೋರ್ಟಲ್ ಸ್ಥಾಪಿಸಲಾಗಿದ್ದು, ಆ ಮೂಲಕ ಉದ್ಯೋಗ ಕೊಡಿಸುವ ಕಾರ್ಯವನ್ನೂ ಮಾಡಲಾಗುತ್ತಿದೆ", ಎಂದರು.

**ಏ. 16ಕ್ಕೆ ಕಲಬುರಗಿಯಲ್ಲಿ ಬೃಹತ್ ಉದ್ಯೋಗ ಮೇಳ**

"ಉದ್ಯೋಗದಾತರ ಮೂಲಕ ಉದ್ಯೋಗಾಂಕ್ಷಿಗಳಿಗೆ ಉದ್ಯೋಗ ಕಲ್ಪಿಸಲು ಈಗಾಗಲೇ ರಾಜ್ಯಾದ್ಯಂತ ಸರ್ಕಾರದ ವತಿಯಿಂದ ಉದ್ಯೋಗ ಮೇಳ ಆಯೋಜಿಸಲಾಗುತ್ತಿದೆ. ಏ.16ರಂದು ಕಲಬುರಗಿಯಲ್ಲಿ ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿದೆ. ಇದಾದ ಬಳಿಕ ಮೈಸೂರು, ಹುಬ್ಬಳ್ಳಿ, ಬೆಳಗಾವಿಗಳಲ್ಲಿ ವಿಭಾಗೀಯ ಮಟ್ಟದ ಬೃಹತ್ ಉದ್ಯೋಗ ಮೇಳಗಳನ್ನು ಆಯೋಜಿಸಲಾಗುವುದು", ಎಂದು ಹೇಳಿದರು.

"ರಾಜ್ಯದಲ್ಲಿ ಉದ್ಯೋಗ ಸಮಸ್ಯೆಗಿಂತಲೂ ಕೌಶಲ ಸಮಸ್ಯೆ ಹೆಚ್ಚಾಗಿದೆ. ಹೀಗಾಗಿ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಕೌಶಲಭರಿತ ಶಿಕ್ಷಣ ನೀಡುವ ಕಾರ್ಯಕ್ರಮಗಳನ್ನು ನೀಡಲಾಗುತ್ತಿದೆ. ಅಲ್ಲದೆ, ಕಲಬುರಗಿ, ಕೊಪ್ಪಳ ಮತ್ತು ಮೈಸೂರನ್ನು ಕೇಂದ್ರೀಕರಿಸಿ 'ಮಲ್ಟಿ ಸ್ಕಿಲ್ ಡೆವಲಪ್ ಮಂಟ್ ಸೆಂಟರ್'ಗಳನ್ನು ಸ್ಥಾಪಿಸಲಾಗುವುದು", ಎಂದು ತಿಳಿಸಿದರು.

ಕೌಶಲ್ಯಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಹಾಗೂ ರಾಜ್ಯ ಸರ್ಕಾರದ ನಿವೃತ್ತ ಅಪರ ಮುಖ್ಯ ಕಾರ್ಯದರ್ಶಿ ಡಾ.ಇ.ವಿ. ರಮಣ ರೆಡ್ಡಿ ಮಾತನಾಡಿ, "ದೇಶದಲ್ಲಿ ಶಿಕ್ಷಣಕ್ಕೆ ಮಾತ್ರ ಆದ್ಯತೆ ನೀಡುತ್ತಿದ್ದುದರಿಂದ ಶಿಕ್ಷಣ ಮುಗಿಸಿ ಹೊರಬರುತ್ತಿರುವವರ ಪೈಕಿ ಶೇ. 85 ಮಂದಿಯಲ್ಲಿ ಕೌಶಲದ ಕೊರತೆ ಇದೆ. ಈ ಹಿನ್ನೆಲೆಯಲ್ಲಿ ಉದ್ಯೋಗ ಮೇಳಗಳ ಮೂಲಕ ಕಂಪನಿ,

ಕೈಗಾರಿಕೆಗಳಿಂದ ಬರುವ ಕೌಶಲ ಬೇಡಿಕೆ ಆಧರಿಸಿ ಕೌಶಲ್ಯಾಧಾರಿತ ಶಿಕ್ಷಣಕ್ಕೆ ಆದ್ಯತೆ ನೀಡಲಾಗುತ್ತಿದೆ. ಬೆಂಗಳೂರು ಹೊರತುಪಡಿಸಿ(ಬಿಯಾಂಡ್‌ಬೆಂಗಳೂರು) ಇತರೆ ಪ್ರದೇಶಗಳಲ್ಲೂ ಕೌಶಲ್ಯಾಧರಿತ ಶಿಕ್ಷಣಕ್ಕೆ ಗಮನ ಹರಿಸಲಾಗುತ್ತಿದೆ. ಇದಕ್ಕೆ ಎಫ್ ಕೆಸಿಸಿಐ ಸಹಕಾರ ನೀಡಬೇಕು", ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಫ್ ಕೆಸಿಸಿಐ ಅಧ್ಯಕ್ಷ ಎಂ.ಜಿ.ಬಾಲಕೃಷ್ಣನ್ ಮಾತನಾಡಿ, "ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸುವುದರ ಜತೆಗೆ ಪ್ರತಿಭೆಗಳಿಗೆ ಅವಕಾಶ ಕಲ್ಪಿಸುವ ಮೂಲಕ ಕೈಗಾರಿಕಾಭಿವೃದ್ಧಿಗೆ ಸೂಕ್ತ ವೇದಿಕೆ ಕಲ್ಪಿಸುವುದು ಎಫ್ ಕೆಸಿಸಿಐ ಉದ್ಯೋಗ ಉತ್ಸವ್ ನ ಪ್ರಮುಖ ಉದ್ದೇಶವಾಗಿದೆ. ಸರಿಯಾದ ಪ್ರತಿಭೆಗಳಿಗೆ ಸರಿಯಾದ ಅವಕಾಶ ಕಲ್ಪಿಸುವ ಉದ್ದೇಶದಿಂದ ಉದ್ಯಮಿಗಳೊಂದಿಗೆ ಸಂವಾದಕ್ಕೂ ಅವಕಾಶ ಮಾಡಿಕೊಡಲಾಗಿದೆ, ನಿರುದ್ಯೋಗಿಗಳಿಗೆ ಕೈಗಾರಿಕಾ ಸ್ನೇಹಿ ಕೌಶಲ ಒದಗಿಸಿ ಸೂಕ್ತ ಉದ್ಯೋಗ ಕಲ್ಪಿಸುವುದು ನಮ್ಮ ಆದ್ಯತೆಯಾಗಿದೆ", ಎಂದು ಹೇಳಿದರು.

ಎಫ್ ಕೆಸಿಸಿಐ ಕೌಶಲ್ಯಾಭಿವೃದ್ಧಿ ಸಮಿತಿ ಅಧ್ಯಕ್ಷ ಅಭಿಷೇಕ್ ಬಿ.ಎ. ಮಾತನಾಡಿ, "ಎಫ್ ಕೆಸಿಸಿಐ ಉದ್ಯೋಗ ಉತ್ಸವ್ ನಲ್ಲಿ 120ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸಿದ್ದು, ಉದ್ಯೋಗಾಂಕ್ಷಿಗಳಿಗೆ ಆವಕಾಶ ಮಾಡಿಕೊಡಲಿವೆ. ಈ ಪೈಕಿ 55 ಕಂಪನಿಗಳು ಎಫ್ ಕೆಸಿಸಿಐ ಸದಸ್ಯರದ್ದಾಗಿರುವುದು ವಿಶೇಷ. 9000 ಮಂದಿ ಇಲ್ಲಿ ನೋಂದಣಿ ಮಾಡಿಕೊಂಡಿದ್ದು,5000 ಉದ್ಯೋಗಾಂಕ್ಷಿಗಳು ಭಾಗವಹಿಸಿದ್ದಾರೆ. ಬ್ಯಾಂಕಿಂಗ್, ಸೇವಾ ವಲಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಉದ್ಯೋಗ ಕೊಡಿಸಲು ಪ್ರಯತ್ನ ಮಾಡಾಗುತ್ತಿದೆ," ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಸ್ಟೇಟ್ ಡೆಂಟಲ್ ಕೌನ್ಸಿಲ್ (ಕೆಎಸ್ ಡಿಸಿ) ವ್ಯವಸ್ಥಾಪಕ ನಿರ್ದೇಶಕ ನಾಗರಾಜ್ ಎನ್. ಎಂ., ಎಫ್ ಕೆಸಿಸಿಐ ಹಿರಿಯ ಉಪಾಧ್ಯಕ್ಷ ಉಮಾರೆಡ್ಡಿ, ಉಪಾಧ್ಯಕ್ಷ ಟಿ.ಸಾಯಿರಾಂ ಪ್ರಸಾದ್, ನಿಕಟಪೂರ್ವ ಅಧ್ಯಕ್ಷ ರಮೇಶ್ ಚಂದ್ರ ಲಹೋಟಿ, ಮಾಜಿ ಅಧ್ಯಕ್ಷ ಮತ್ತು ಕೌಶಲ್ಯಾಭಿವೃದ್ಧಿ ಸಮಿತಿ ಸಲಹೆಗಾರ ಕೆ.ರವಿ, ಡೆವಲಪ್ ಸಂಸ್ಥೆಯ ಸಂಸ್ಥಾಪಕ ಮತ್ತು ಸಿಇಓ ತೇಜಸ್ ಎನ್.ಗೌಡ, ಎಫ್ ಕೆಸಿಸಿಐ ಪದಾಧಿಕಾರಿಗಳು ಮತ್ತು ಸದಸ್ಯರು ಪಾಲ್ಗೊಂಡಿದ್ದರು. ಉದ್ಯೋಗ ಉತ್ಸವದಲ್ಲಿ 6 ವಲಯಗಳಿಂದ 120ಕ್ಕೂ ಅಧಿಕ ಕಂಪನಿಗಳು, 150ಕ್ಕೂ ಹೆಚ್ಚಿನ ಶಿಕ್ಷಣ ಸಂಸ್ಥೆಗಳಿಂದ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ತಾಲೂಕು ಸಮಾಜ ಕಲ್ಯಾಣ ಇಲಾಖೆ ಹಾಗೂ ತಾಲೂಕು ಆಡಳಿತದ ಸಂಯುಕ್ತ ಆಶ್ರಯದಲ್ಲಿ ಬಾಬು ಜಗಜೀವನರಾಂ ರವರ 118ನೇ ಜಯಂತ್ಯುತ್ಸವ ಆಚರಣೆ



**ಕೆ.ಆರ್.ಪೇಟೆ :** ಪಟ್ಟಣದ ಶತಮಾನದ ಶಾಲೆಯ ಆವರಣದಲ್ಲಿ ಪುರಸಭೆ, ತಾಲೂಕು ಸಮಾಜ ಕಲ್ಯಾಣ ಇಲಾಖೆ ಹಾಗೂ ತಾಲೂಕು ಆಡಳಿತದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ದೇಶದ ಉಪ ಪ್ರಧಾನಿ ಬಾಬೂಜಗಜೀವನ್‌ರಾಮ್‌ಅವರ118ನೇಜಯಂತ್ಸವ ಆಚರಣೆ ಮಾಡಲಾಯಿತು,ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪುರಸಭೆ ಅಧ್ಯಕ್ಷೆ ಪಂಕಜಾಪ್ರಕಾಶ್ ಮಾತನಾಡಿಶೋಷಿತಸಮುದಾಯಗಳಿಗೆಬಾಬೂಜೀ ಮತ್ತು ಅಂಬೇಡ್ಕರ್ ಎರಡು ಕಣ್ಣುಗಳಿದ್ದಂತೆ, ದೇಶದ ಉಪ ಪ್ರಧಾನಿಯಾಗಿ, ರಕ್ಷಣೆ,ರೈಲ್ವೆ ಹಾಗೂ ಕಾರ್ಮಿಕ ಸಚಿವರಾಗಿ ಬಾಬೂ ಜಗಜೀವನ್ ರಾಮ್ ಅವರ ಕೊಡುಗೆಹಾಗೂಕಾರ್ಯದಕ್ಷತೆಯುಅಪಾರವಾಗಿದೆ. ಯುವಜನರುಹಾಗೂವಿದ್ಯಾರ್ಥಿಗಳುಬಾಬುಜಿಅವರ ಜೀವನದ ಅದರ್ಶಗಳನ್ನು ಮೈಗೂಡಿಸಿಕೊಂಡು ಬದಲಾವಣೆಯ ದಿಕ್ಕಿನತ್ತ ಸಾಗಬೇಕು. ಸೇವಾ ಮನೋಭಾವನೆ ಹಾಗೂ ಪರೋಪಕಾರಿ ಗುಣಗಳು ಜೀವನದ ಉಸಿರಾಗಬೇಕು ಎಂದು ಕರೆ ನೀಡಿದರು.ಸಿಂದಘಟ್ಟ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ವೆಂಕಟರಾಮು ಬಾಬುಜಿ ಅವರ ಜೀವನ ಸಾಧನೆ ಕುರಿತು ಮಾತನಾಡಿದರು.

ಇದೇ ಸಂಧರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಾಧಕರು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಪುರಸಭೆ ಉಪಾಧ್ಯಕ್ಷೆ ಸೌಭಾಗ್ಯ ಉಮೇಶ್, ಮುಖ್ಯಧಿಕಾರಿ ನಟರಾಜ್, ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಸುಷ್ಮಾ, ತಹಶೀಲ್ದಾರ್ ಲೋಕೇಶ್, ಕ್ಷೇತ್ರ ಶಿಕ್ಷಣಾಧಿಕಾರಿ ಮಂಜೇಗೌಡ, ಸಮಾಜ ಸೇವಕ ನಂಜುಂಡಸ್ವಾಮಿ, ಮುಖಂಡರಾದ ಸುಧಾಕರ್, ಪುಟ್ಟರಾಜು, ರಾಮದಾಸು, ಸೋಮಸುಂದರ್,ಬಸ್ತಿರಂಗಪ್ಪ,ಡಿ.ಪ್ರೇಮಕುಮಾರ್, ಡಾ.ಶಿವಪ್ಪ, ಮಾಂಬಳ್ಳಿ ಜಯರಾಮ್, ಊಚನಹಳ್ಳಿ ನಟರಾಜ್, ಚೆಲುವರಾಜು, ಸುನಿಲ್ ಕುಮಾರ್, ಯೋಗೇಶ್,

ಪೊಲೀಸ್ ಇನ್ಸ್ ಪೆಕ್ಟರ್ ಸುಮಾರಾಣಿ, ಉಪ ನೋಂದಣಿ ಅಧಿಕಾರಿ ವಿಜಯ್ ಕುಮಾರ್, ಕುಡಿಯುವ ನೀರು ವಿಭಾಗದ ಎಇಇ ಮಂಜುಳಾ, ವಲಯ ಅರಣ್ಯಅಧಿಕಾರಿ ಅನಿತಾ, ತಾಲೂಕು ಬಿಸಿಎಂ ಅಧಿಕಾರಿ ವೆಂಕಟೇಶ್, ತಾಲೂಕು ಸಮಾಜ ಕಲ್ಯಾಣ ಅಧಿಕಾರಿ ದಿವಾಕರ್, ಶಿಶು ಮತ್ತು ಅಭಿವೃದ್ಧಿ ಅಧಿಕಾರಿ ಅರುಣ್, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಕುಮಾರ್, ಶಿವಣ್ಣ, ರಾಜಯ್ಯ,

ಕೃಷ್ಣನಾಯಕ್ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಬಾಬುಜಿ ಅವರ ಬೃಹತ್ ಭಾವ ಚಿತ್ರವನ್ನು ಬೆಳ್ಳಿಯ ಸಾರೋಟಿನಲ್ಲಿಟ್ಟು ಜಾನಪದ ಕಲಾ ತಂಡಗಳ ಅದ್ದೂರಿ ಮೆರವಣಿಗೆ ನಡೆಸಿ ಸಂಭ್ರಮಿಸಲಾಯಿತು.

# ನಗರ ಸಭೆಯ ವಿಶೇಷ ಸಾಮಾನ್ಯ ಸಭೆ ಕರೆಯಲು ಆಗ್ರಹ

**ಬಾಗಲಕೋಟ :** ಬಾಗಲಕೋಟ ಪಟ್ಟಣ ಅಭಿವೃದ್ಧಿ ಪ್ರಾಧಿಕಾರ ರದ್ದತಿ ಹಾಗೂ ಮುಳುಗಡೆ ಪ್ರದೇಶದ ಕಟ್ಟಡಗಳಿಗೆ 1991ರಲ್ಲಿ ಸರಕಾರದ ನಗರಾಭಿವೃದ್ಧಿ ಇಲಾಖೆಯ ಆದೇಶ

ಪ್ರಕಾರ ಮನೆಕರಗಳನ್ನು ಪರಿಷ್ಕರಿಸದಿರಲು ಹೊರಡಿಸಿದ ಆದೇಶ ಕುರಿತು ಚರ್ಚಿಸಲು ನಗರ ಸಭೆಯ ವಿಶೇಷ ಸಾಮಾನ್ಯ ಸಭೆಯನ್ನು ಕರೆದು ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕೆಂದು ನಗರ ಸಭೆಯ ಮಾಜಿ ಸದಸ್ಯ, ನಗರ ಯೋಜನಾ ಪ್ರಾಧಿಕಾರದ ಮಾಜಿ ಸಭಾಪತಿ ಎ.ಎ.ದಂಡಿಯಾ ನಗರ ಸಭಾ ಅಧ್ಯಕ್ಷರಿಗೆ ಮನವಿ ಮಾಡಿಕೊಂಡಿದ್ದಾರೆ.

1964 ರಿಂದಲೇ ಮುಳುಗಡೆ ನೆಪದಲ್ಲಿ ಮುಳುಗಡೆ ಪ್ರದೇಶದಲ್ಲಿ ಯಾವದೇ ತರಹದ ಅಭಿವೃದ್ಧಿ ಕಾರ್ಯಗಳು ನಡೆದಿರುವುದಿಲ್ಲ್. ವ್ಯಾಪಾರ ವಹಿವಾಟುಗಳು ಸ್ಥಗಿತಗೊಂಡಿವೆ.

ಇದನ್ನು ಗಮನಿಸಿ ನಗರಾಭಿವೃದ್ಧಿ ಇಲಾಖೆ ಮನೆ ಕರಗಳನ್ನು ಪರಿಷ್ಕರಿಸದಂತೆ ಆದೇಶಿಸಿದೆ. ಆದ-'ರೂ ಇದನ್ನು ಗಮನಿಸದೇ ಸರಕಾರ ಸ್ವಯಂ ಆಸ್ತಿ ತೆರಿಗೆ ಘೋಷಣೆ ಹಿನ್ನೆಲೆಯಲ್ಲಿ ನೂತನ ತೆ-ರಿಗೆಗಳನ್ನು ಹೇರಿದೆ. ಇದು ಘಾಯದ ಮೇಲೆ ಬರೆಯ ಯಳೆದಂತಾಗಿದೆ.

ಈಗ ತೆರಿಗೆಗಳು ಹೆಚ್ಚಾಗಿದ್ದು ಸಂತ್ರಸ್ತರಿಗೆ ಮನೆ ಕರಗಳನ್ನು ನಗರ ಸಭೆಗೆ ಭಾರಣಾ ಮಾಡಲು ಸಾಧ್ಯವಾಗುತ್ತಿಲ್ಲ.

ಅದರಂತೆ ನೀರಿನ ತೆರಿಗೆ ಹೆಚ್ಚಾಗಿದ್ದು ಇವೆರಡನ್ನೂ ಸಂಪೂರ್ಣ ಮನ್ನಾ ಮಾಡಲು ತೀರ್ಮಾನಿಸಿ ಪ್ರಸ್ತಾವನೆ ಸರಕಾರಕ್ಕೆ ಸಲ್ಲಿಸಲು ದಂಡಿಯಾ ಅರಿಕೆ ಮಾಡಿಕೊಂಡಿದ್ದಾರೆ.

"SIHI KAHI" Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State

Designed by MKG-9535762618